ಸಂಪಾದಕರು: ರವಿಕುಮಾರ್ ಸಿ.ಹೆಚ್.

RNI: KARKAN/2021/80805

ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

ಸೂರ್ಯ ಪ್ರಗತಿ

SURYA PRAGATHI Kannada daily

ಡಿಜಿಟಲ್ ನ್ಯೂಸ್ ಕಹಾನಿ

ಪ್ರತಿ ಸುದ್ಧಿಯ ಧ್ವನಿ

suryapragathidailynews@gmail.com 9901010109 L2/RNP-1285/TMR/2025-27

Volume: 05 ಸಂಪುಟ: 05 | Issue: 230 ಸಂಚಿಕೆ: 230 | Date: 06-10-2026 Tuesday | RNI NO : KARKAN/2021/80805 | L2/RNP-1285/TMR/2025-27 | Page : 4 ಪುಟ : 4 | Price: 1.00 ಬೆಲೆ: 1.00 ರೂ

ಸಣ್ ಸುದ್ದಿ

ಯಡಿಯೂರು ಸಿದ್ದಲಿಂಗೇಶ್ವರ ದೇವಾಲಕ್ಕೆ ಉಮಾಶ್ರೀ ಭೇಟಿ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಜಿಲ್ಲೆಯ ಕುಣಿಗಲ್ ತಾಲ್ಲೂಕು ಶ್ರೀಕ್ಷೇತ್ರ ಯಡಿಯೂರು ಶ್ರೀ ಸಿದ್ದಲಿಂಗೇಶ್ವರ ಸ್ವಾಮಿಯ ದೇವಾಲಯಕ್ಕಿಂದು ಕರ್ನಾಟಕ ವಿಧಾನ ಪರಿಷತ್ತಿನ ಉಪ ಸಭಾಪತಿ ಹಾಗೂ ಹಿರಿಯ ಕಲಾವಿದೆ ಡಾ: ಉಮಾಶ್ರೀ ಭೇಟಿ ನೀಡಿ ಪೂಜೆ ಸಲ್ಲಿಸಿದರು.

ಉಪ ಸಭಾಪತಿಯವರನ್ನು ಮಂಗಳ ವಾದ್ಯಗಳೊಂದಿಗೆ ದೇಗುಲಕ್ಕೆ ಬರಮಾಡಿ ಕೊಳ್ಳಲಾಯಿತು. ನಂತರ ಉಮಾಶ್ರೀ ಅವರು, ಶ್ರೀ ತೋಟದ ಸಿದ್ದಲಿಂಗರವರ ನಿರ್ನಿಲ್ಕ್ತಿವೆಯೋಗ ಗದ್ದುಗೆಗೆ ವಿಶೇಷ ಪೂಜೆ ಸಲ್ಲಿಸಿದರು. ದೇವರ ದರ್ಶನ ಪಡೆದು, ನಾಡಿಗೆ ಉತ್ತಮ ಮಳೆ ಬೆಳೆಯಾಗಲಿ; ನಾಡಿನ ಸರ್ವರಿಗೂ ಒಳಿತಾಗಲಿ ಎಂದು ಆ ಭಗವಂತನಲ್ಲಿ ಪ್ರಾರ್ಥಿಸಿದರು.

ಬಳಿಕ ದೇವಾಲಯದ ವ್ಯವಸ್ಥಾಪನಾ ಮಂಡಳಿಯಿಂದ ಉಪಸಭಾಪತಿ ಡಾ: ಉಮಾಶ್ರೀ ಅವರನ್ನು ಗೌರವಿಸಲಾಯಿತು. ಇದೇ ಸಂದರ್ಭದಲ್ಲಿ ಪುಣ್ಯಕ್ಷೇತ್ರಕ್ಕೆ ಆಗಮಿಸಿದ್ದ ಸಹಭಕ್ತರೊಂದಿಗೆ ಬೆರೆತು ಯೋಗಕ್ಷೇಮ ವಿಚಾರಿಸಿದರು.

ನಂತರ, ಯಡಿಯೂರು ಶ್ರೀ ಕ್ಷೇತ್ರದ ಪ್ರಸಾದ ಮಂದಿರಕ್ಕೆ ತೆರಳಿದ ಉಪ ಸಭಾಪತಿ ಡಾ: ಉಮಾಶ್ರೀ ಅವರು, ಪ್ರಸಾದ ಮಂದಿರದ ಮಹಿಳೆಯರೊಂದಿಗೆ ಸೇರಿ ಹೋಳಿಗೆ ಮಾಡಿದರು. ತದನಂತರ, ಭೋಜನಾಲಯದಲ್ಲಿ ಶ್ರೀ ಸಿದ್ದಲಿಂಗೇಶ್ವರ ಸ್ವಾಮಿಗೆ ಪೂಜೆ ಸಲ್ಲಿಸಿ, ದಾಸೋಹಕ್ಕೆ ಚಾಲನೆ ನೀಡಿದರು. ಅಲ್ಲದೆ, ಸಹಭಕ್ತರಿಗೆ ಭೋಜನ ಬಡಿಸಿದರು. ತಾವು ಕೂಡ ಸಹಪಂಕ್ತಿಯಲ್ಲಿ ಕುಳಿತು ಪ್ರಸಾದ ಸವಿದು ಸಂತಸಪಟ್ಟರು.

VBG-RAM-G ಕಾಮಗಾರಿ ಪರಿಶೀಲನೆ

ಕೊರಟಗೆರೆ ತಾಲ್ಲೂಕಿನ ತುಂಬಾಡಿ ಗೊಲ್ಲಹಳ್ಳಿ ಗ್ರಾಮದಲ್ಲಿ ಕೊರಟಗೆರೆ ತಾಲ್ಲೂಕಿನ ಕಸಬಾ ಹೋಬಳಿಯ ತುಂಬಾಡಿ ಗೊಲ್ಲಹಳ್ಳಿ ಗ್ರಾಮದಲ್ಲಿ ಬರ ಪರಿಹ್ಯತಿಯ ಹಿನ್ನೆಲೆಯಲ್ಲಿ ಗ್ರಾಮೀಣ ಉದ್ಯೋಗ ಸೃಷ್ಟಿ ಹಾಗೂ ಜಲ ಸಂರಕ್ಷಣೆಯ ಉದ್ದೇಶದಿಂದ ಕೈಗೊಳ್ಳಲಾಗುತ್ತಿರುವ ಗಿಳಿ–ಖಿಂಬ–ಉ ಕಾಮಗಾರಿಯ ಪ್ರಗತಿ ಮತ್ತು ಪರಿಣಾಮಕಾರಿತ್ವದನ್ನು ಐಎಂಟಿ ತಂಡದ ಮುಖ್ಯಸ್ಥರಾದ ಮಾನ್ಯ ಅಪರ್ ಕುಮಾರ್ ಸಾಯಿ, ಐಎಎಸ್ ಅವರ ನೇತೃತ್ವದಲ್ಲಿ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳೊಂದಿಗೆ ಕ್ಷೇತ್ರ ಭೇಟಿ ನೀಡಿ ಪರಿಶೀಲಿಸಲಾಯಿತು.

ಈ ಸಂದರ್ಭದಲ್ಲಿ ಸ್ಥಳದಲ್ಲಿ ಪ್ರಗತಿಯಲ್ಲಿರುವ VBG-RAM-G ಕಾಮಗಾರಿಯ ಸ್ಥರೂಪ, ಅನುಷ್ಠಾನ ಹಾಗೂ ಪ್ರಗತಿಯ ಹಂತ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆಯಲಾಯಿತು. ಕಾಮಗಾರಿಯಲ್ಲಿ ತೊಡಗಿಸಿಕೊಂಡಿರುವ ಕೂಲಿ ಕಾರ್ಮಿಕರೊಂದಿಗೆ ನೇರವಾಗಿ ಸಂವಾದ ನಡೆಸಿ, ಅವರಿಗೆ ದೊರೆಯುತ್ತಿರುವ ಉದ್ಯೋಗಾವಕಾಶ, ಕೆಲಸದ ದಿನಗಳು ಹಾಗೂ ಕಾಮಗಾರಿ ನಿರ್ವಹಣೆಗೆ ಸಂಬಂಧಿಸಿದ ಸಮಸ್ಯೆಗಳ ಕುರಿತು ಮಾಹಿತಿ ಪಡೆಯಲಾಯಿತು.

ಇದೇ ವೇಳೆ ಗ್ರಾಮಸ್ಥರೊಂದಿಗೆ ಸಂವಾದ ನಡೆಸಿದ ಐಎಂಟಿ ತಂಡವು, ಕಾಮಗಾರಿಯಿಂದ ಗ್ರಾಮಕ್ಕೆ ದೊರೆಯುವ ನಿರಿಕ್ಷಿತ ಪ್ರಯೋಜನಗಳು, ಸ್ಥಳೀಯ ಅಗತ್ಯತೆಗಳು ಹಾಗೂ ಸಾರ್ವಜನಿಕರ ಕುಂದುಕೊರತೆಗಳ ಕುರಿತು ಮಾಹಿತಿ ಪಡೆದುಕೊಂಡಿತು. ಬರ ಪರಿಹ್ಯತಿಯನ್ನು ಎದುರಿಸುವ ಸಂದರ್ಭದಲ್ಲಿ ಇಂತಹ ಕಾಮಗಾರಿಗಳ ಮೂಲಕ ಸ್ಥಳೀಯರಿಗೆ ಉದ್ಯೋಗ ಕಲ್ಪಿಸುವುದರ ಜೊತೆಗೆ ಜಲ ಸಂರಕ್ಷಣೆ ಹಾಗೂ ಜಲಮೂಲಗಳ ಅಭಿವೃದ್ಧಿಗೆ ಕೈಗೊಳ್ಳಲಾಗುತ್ತಿರುವ ಕ್ರಮಗಳ ಕುರಿತು ಅಧಿಕಾರಿಗಳಿಂದ ವಿವರ ಪಡೆಯಲಾಯಿತು.

ಪಾವಗಡದಲ್ಲಿ ಸರ್ಕಾರದ ವಿರುದ್ಧ JDS-BJP ಜಂಟಿ ಸಿಡಿಲಬ್ಬರ: ರಾಜ್ಯಪಾಲರಿಗೆ ಮನವಿ

ಸೂರ್ಯಪ್ರಗತಿನ್ಯೂಸ್.ಕಾಂ
ವರದಿ: ನರಸಿಂಹಪ್ಪ

ಪಾವಗಡ: ತಾಲೂಕಿನ ಜನರ ಮೂಲಭೂತ ಸಮಸ್ಯೆಗಳಿಗೆ ಸ್ಪಂದಿಸದ ರಾಜ್ಯ ಸರ್ಕಾರದ ಧೋರಣೆಗೆ ಖಂಡಿಸಿ, ಪಾವಗಡದಲ್ಲಿ ಇಂದು ಜನತಾದಳ (ಜಾತ್ಯತೀತ) ಮತ್ತು ಭಾರತೀಯ ಜನತಾ ಪಕ್ಷದ ವತಿಯಿಂದ ಬೃಹತ್ ಜಂಟಿ ಪ್ರತಿಭಟನೆ ನಡೆಯಿತು. ತಹಶೀಲ್ದಾರ್ ಕಚೇರಿ ಎದುರು ಸೇರಿದ ನೂರಾರು ಕಾರ್ಯಕರ್ತರು ಮತ್ತು ರೈತರು ಸರ್ಕಾರದ ವಿರುದ್ಧ ಘೋಷಣೆಗಳನ್ನು ಕೂಗಿ ಆಕ್ರೋಶ ವ್ಯಕ್ತಪಡಿಸಿದರು. ಬಳಿಕ ತಹಶೀಲ್ದಾರ್ ಮೂಲಕ ರಾಜ್ಯಪಾಲರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಬರದ ನಾಡಿನ ಕನ್ನೇರೇ ಈ ಹೋರಾಟದ ಮೂಲ

ಪಾವಗಡ ತಾಲೂಕು ನಿರಂತರ ಬರಗಾಲ ಪೀಡಿತ ಪ್ರದೇಶ. ಇಲ್ಲಿನ ರೈತರು, ವೃದ್ಧರು, ಕೂಲಿ ಕಾರ್ಮಿಕರು ಪ್ರತಿನಿತ್ಯ ಹೋರಾಟವನ್ನೇ ಬದುಕಾಗಿಸಿಕೊಂಡಿದ್ದಾರೆ. ಇಂತಹ ಸಂದರ್ಭದಲ್ಲಿ ಸರ್ಕಾರದ ಯೋಜನೆಗಳು ಜನರನ್ನು ತಲುಪದಿರುವುದು ಈ ಪ್ರತಿಭಟನೆಗೆ ಕಾರಣವಾಗಿದೆ ಎಂಯ ಮುಖಂಡರು ತಿಳಿಸಿದರು.

ನಮ್ಮ 10 ಪ್ರಮುಖ ನ್ಯಾಯಯುತ ಬೇಡಿಕೆಗಳು:

ಪಾವಗಡದ ಜೀವನಾಡಿಗೆ ನೀರು ಹರಿಸಿ: ಭದ್ರಾ ಮೇಲ್ಂದಡೆ ಮತ್ತು ಎತ್ತಿನಹೊಳೆ ಯೋಜನೆಗಳು ಕೇವಲ ಕಾಗದ ಮೇಲೆ ಉಳಿದಿವೆ. ಪಾವಗಡಕ್ಕೆ ಕೂಡಲೇ ನೀರು ಹರಿಸುವ ಕಾಮಗಾರಿಗಳನ್ನು ಯುದ್ಧೋಪಾದಿಯಲ್ಲಿ ಪೂರ್ಣಗೊಳಿಸಬೇಕು.

ರಾಜಕೀಯ ದ್ವೇಷದ ಸುಳ್ಳುಕೇಸು ನಿಲ್ಲಲಿ: ತಾಲೂಕಿನಲ್ಲಿ ಎಆಐ ಮತ್ತು ಎಂಕೆ ಕಾರ್ಯಕರ್ತರನ್ನು ಗುರಿಯಾಗಿಸಿ ಪೊಲೀಸರು ವಿನಾಕಾರಣ ಸುಳ್ಳು ಕೇಸುಗಳನ್ನು ದಾಖಲಿಸುತ್ತಿದ್ದಾರೆ. ಇದು ಪ್ರಜಾಪ್ರಭುತ್ವದ ಕಗ್ಗೊಲೆ. ಕೂಡಲೇ ಇದನ್ನು ನಿಲ್ಲಿಸಿ ಕಾನೂನು ವ್ಯವಸ್ಥೆ ಕಾಪಾಡಬೇಕು.

ಆಡಿಕೆ ಬೆಳೆಗಾರರ ಬದುಕು ಉಳಿಸಿ: ರಾಜ್ಯದಲ್ಲಿ ಗುಟ್ಕಾ ನಿಷೇಧದ ಹೆಸರಿನಲ್ಲಿ ಅಡಿಕೆ ಮಾರುಕಟ್ಟೆ ಸಂಪೂರ್ಣ ಕುಸಿದಿದೆ. ವ್ಯಾಪಾರಿಗಳು ಅಡಿಕೆ ಕೊಳ್ಳಲು ಹಿಂದೇಟು ಹಾಕುತ್ತಿದ್ದು ರೈತ ಬೆಳೆದ ಬೆಳೆಗೆ ಬೆಲೆಯೆಂಬುದಂತಾಗಿದೆ. ಕೂಡಲೇ ನಿಷೇಧ ಹಿಂಪಡೆಯಬೇಕು.

ಮಾಶಾಸನವೇ ಜೀವನ – 6 ತಿಂಗಳಿಂದ ಬಿಡುಗಡೆಯಿಲ್ಲ: ವೃದ್ಧರು, ವಿಧವೆಯರು, ಅಂಗವಿಕಲರು, ಸಂಧ್ಯಾ ಸುರಕ್ಷಾ ಫಲಾನುಭವಿಗಳಿಗೆ ಕಳೆದ 6 ತಿಂಗಳಿನಿಂದ ಮಾಶಾಸನವೇ ಬಂದಿಲ್ಲ. ಇದನ್ನೇ ನಂಬಿ ಬದುಕುತ್ತಿರುವವರಿಗೆ ಸರ್ಕಾರ ನಾಚಿಕೆಗೇಡಿತನದ ಬದುಕು ನೀಡಿದೆ.

ಜಾನುವಾರುಗಳಿಗೂ ಮೇವು, ನೀರಿಲ್ಲ: ಬರಗಾಲದಿಂದ ದನ–ಕರುಗಳಿಗೆ ಮೇವಿಲ್ಲ, ನೀರಿಲ್ಲ. ಕೂಡಲೇ ಪ್ರತಿ ಹೋಬಳಿಗೆ ಮೇವು ಬ್ಯಾಂಕ್ ತೆರೆಯಬೇಕು ಮತ್ತು ಜಾನುವಾರುಗಳಿಗೆ ಕುಡಿಯುವ ನೀರಿನ ವ್ಯವಸ್ಥೆ ಮಾಡಬೇಕು.

4ನೇ ಪುಟಕ್ಕೆ

ತುಮಕೂರಿನಲ್ಲಿ ಬರ ಪರಿಸ್ಥಿತಿ ಗಂಭೀರ; ಕುಡಿಯುವ ನೀರಿಗೆ ತುರ್ತು ಪರ್ಯಾಯ ವ್ಯವಸ್ಥೆಗೆ ಪರಂ ಸೂಚನೆ

ತುಮಕೂರು, ಅಕ್ಟೋಬರ್ 5: ಉಪಮುಖ್ಯಮಂತ್ರಿಗಳು ಹಾಗೂ ಕಂದಾಯ ಸಚಿವರಾದ ಡಾ. ಜಿ. ಪರಮೇಶ್ವರ ಅವರು ಇಂದು ಮಹಾತ್ಮ ಗಾಂಧಿ ಜಿಲ್ಲಾ ಕ್ರೀಡಾಂಗಣದ ಸಭಾ ಕೊಠಡಿಯಲ್ಲಿ "ತುಮಕೂರು ಜಿಲ್ಲೆಯಲ್ಲಿ ಬರ ಪರಿಸ್ಥಿತಿ ಮತ್ತು ನಿರ್ವಹಣೆ" ಕುರಿತು ಪ್ರಗತಿ ಪರಿಶೀಲನಾ ಸಭೆ ನಡೆಸಿ, ಜಿಲ್ಲೆಯಲ್ಲಿನ ಕುಡಿಯುವ ನೀರು, ಮೇವು, ಉದ್ಯೋಗ ಸೃಷ್ಟಿ ಸೇರಿದಂತೆ ಬರ ನಿರ್ವಹಣೆಗೆ ಕೈಗೊಂಡಿರುವ ಕ್ರಮಗಳನ್ನು ಪರಿಶೀಲಿಸಿದರು.

ಬಳಿಕ ಸುದ್ದಿಗಾರರನ್ನು ಉದ್ದೇಶಿಸಿ ಮಾತನಾಡಿದ ಅವರು, ರಾಜ್ಯದಲ್ಲಿ ಅಲ್ಪಲ್ಪ ಪ್ರಮಾಣದ ಮಳೆಯಾಗುತ್ತಿದ್ದರೂ ಬರ ಪರಿಸ್ಥಿತಿಯಲ್ಲಿ ಯಾವುದೇ ಗಮನಾರ್ಹ ಸುಧಾರಣೆ ಕಂಡುಬಂದಿಲ್ಲ. ರಾಜ್ಯ ಸರ್ಕಾರ ಮೊದಲ ಹಂತದಲ್ಲಿ 101 ತಾಲ್ಲೂಕುಗಳನ್ನು ಬರಪೀಡಿತ ಎಂದು ಘೋಷಿಸಿ, ಕೇಂದ್ರ ಸರ್ಕಾರಕ್ಕೆ ಮೆಮೊರಾಂಡಮ್ ಸಲ್ಲಿಸಿತ್ತು ರಾಜ್ಯದ

ಮನವಿಯ ಮೇರೆಗೆ ಕೇಂದ್ರ ಸರ್ಕಾರ ಮೂರು ತಂಡಗಳನ್ನು ಕಳುಹಿಸಿದ್ದು ಅಕ್ಟೋಬರ್ 3ರಿಂದ 6ರವರೆಗೆ ವಿವಿಧ ಜಿಲ್ಲೆಗಳಲ್ಲಿ ಬರ ಪರಿಸ್ಥಿತಿಯನ್ನು ಪರಿಶೀಲಿಸುತ್ತಿವೆ ಎಂದು ತಿಳಿಸಿದರು.

ಕೇಂದ್ರ ತಂಡಕ್ಕೆ ಬರದ ವಾಸ್ತವ ಸ್ಥಿತಿ ಮನವರಿಕೆ: ರಾಜ್ಯಕ್ಕೆ ಆಗಮಿಸಿರುವ ಕೇಂದ್ರದ ತಂಡಗಳಿಗೆ ಮುಖ್ಯಮಂತ್ರಿಗಳು, ಉಪಮುಖ್ಯಮಂತ್ರಿಗಳು, ಮುಖ್ಯ ಕಾರ್ಯದರ್ಶಿ ಹಾಗೂ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳು ರಾಜ್ಯದ ಬರ ಪರಿಸ್ಥಿತಿ ಕುರಿತು ಸಮಗ್ರ ಮಾಹಿತಿ ನೀಡಿದ್ದಾರೆ. ಜಿಲ್ಲೆಗಳಲ್ಲಿ ಜಿಲ್ಲಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು ಹಾಗೂ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ತಂಡಗಳಿಗೆ ಸ್ಥಳೀಯ ಪರಿಸ್ಥಿತಿ ವಿವರಿಸಿದ್ದಾರೆ. ಬರದಿಂದ ತೀವ್ರವಾಗಿ ಬಾಧಿತವಾದ ಪ್ರದೇಶಗಳಿಗೆ ತಂಡಗಳನ್ನು ಸೇರಲಾಗಿ ಕರೆದೊಯ್ದು ವಾಸ್ತವ ಸ್ಥಿತಿಯನ್ನು ತೋರಿಸಲಾಗಿದೆ ಎಂದು ಡಾ. ಪರಮೇಶ್ವರ್ ಹೇಳಿದರು.

ತುಮಕೂರು ಜಿಲ್ಲೆಯಲ್ಲಿಯೂ ಕೇಂದ್ರ ತಂಡ ಮೂರ್ನಾಲ್ಕು ತಾಲ್ಲೂಕುಗಳಿಗೆ ಭೇಟಿ ನೀಡಿದ್ದು ಜಿಲ್ಲಾಡಳಿತ ಮತ್ತು ಸಂಬಂಧಪಟ್ಟ ಅಧಿಕಾರಿಗಳು ಬರದ ಪರಿಣಾಮಗಳ ಕುರಿತು ಮಾಹಿತಿ ನೀಡಿದ್ದಾರೆ ಎಂದರು.

ರಾಜ್ಯದಲ್ಲಿ ಪ್ರಸ್ತುತ ಸುಮಾರು 217 ತಾಲ್ಲೂಕುಗಳನ್ನು ಬರಪೀಡಿತ ಪ್ರದೇಶಗಳೆಂದು ಘೋಷಿಸಲಾಗಿದೆ. 177 ತಾಲ್ಲೂಕುಗಳಿಗೆ ಸಂಬಂಧಿಸಿದಂತೆ ಕೇಂದ್ರಕ್ಕೆ ಮೆಮೊರಾಂಡಮ್ ಸಲ್ಲಿಸಲಾಗಿದ್ದು ಈ ಪ್ರದೇಶಗಳಲ್ಲಿ ಸುಮಾರು ₹46 ಸಾವಿರ ಕೋಟಿ ನಷ್ಟ ಉಂಟಾಗಿದೆ ಎಂದು ತಿಳಿಸಿದರು.

ಎನ್‌ಡಿಆರ್‌ಎಫ್ ಮಾರ್ಗಸೂಚಿಗಳಡಿ ಸದ್ಯ ಸುಮಾರು 10 ಸಾವಿರದಿಂದ 11 ಸಾವಿರ ಕೋಟಿ ಪರಿಹಾರವನ್ನು ಕೇಂದ್ರ ಸರ್ಕಾರದಿಂದ ಕೋರಲಾಗಿದೆ. ಸಂಪೂರ್ಣ ನಷ್ಟದ ಮಾಹಿತಿ ಲಭ್ಯವಾದ ಬಳಿಕ ರಾಜ್ಯದ ಬೇಡಿಕೆಯ ಪ್ರಮಾಣವೂ ಹೆಚ್ಚಾಗಲಿದೆ ಎಂದು ಹೇಳಿದರು.

ಕೇಂದ್ರ ಸರ್ಕಾರದ ಮಾರ್ಗಸೂಚಿಗಳ ಪ್ರಕಾರವೇ ನೆರವು ನೀಡುವಂತೆ ರಾಜ್ಯ ಮನವಿ ಮಾಡಿದೆ. ಕೇಂದ್ರ ತಂಡ ರಾಜ್ಯದ ವಾಸ್ತವ ಪರಿಸ್ಥಿತಿಯನ್ನು ಅರ್ಥಮಾಡಿಕೊಂಡಯ ಕೇಂದ್ರಕ್ಕೆ ಸೂಕ್ತ ವರದಿ ನೀಡಲಿದೆ ಎಂಬ ವಿಶ್ವಾಸವಿದೆ. ಅದರ ಆಧಾರದ ಮೇಲೆ ಕರ್ನಾಟಕಕ್ಕೆ ಅಗತ್ಯ ಪರಿಹಾರ

ಮೇವು ಬ್ಯಾಂಕ್, ಸಮರ್ಪಕ ವಿದ್ಯುತ್‌ಗೆ ಆಗ್ರಹಿಸಿ ರೈತರ ಪ್ರತಿಭಟನೆ

ಡಿ.ಸಿ. ಕಚೇರಿ ಬಳಿ ಜಾನುವಾರು, ಎತ್ತಿನ ಗಾಡಿ, ಟ್ರಾಕ್ಟರ್‌ನೊಂದಿಗೆ ಹೋರಾಟ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ಜಿಲ್ಲೆಯ ಪ್ರತಿ ಹೋಬಳಿಗೊಂದು ಮೇವು ಬ್ಯಾಂಕ್ ಸ್ಥಾಪನೆ, ಸಮರ್ಪಕ ವಿದ್ಯುತ್ ಸರಬರಾಜು ಸೇರಿದಂತೆ ವಿವಿಧ ಬೇಡಿಕೆಗಳನ್ನು ಈಡೇರಿಸುಂ ಸರ್ಕಾರವನ್ನು ಒತ್ತಾಯಿಸಿ ರಾಜ್ಯ ರೈತ ಸಂಘ, ರೈತ ಶಕ್ತಿ ಹಾಗೂ ತಿಪ್ಪೆಗೂರು ತಾಲ್ಲೂಕು ಹಳ್ಳಿಕಾರ್ ರೈತ ಸಂಘದ ನೇತೃತ್ವದಲ್ಲಿ ರೈತರು ಜಾನುವಾರು, ಎತ್ತಿನಗಾಡಿ, ಟ್ರಾಕ್ಟರ್‌ನೊಂದಿಗೆ ಜಿಲ್ಲಾಧಿಕಾರಿ ಕಚೇರಿ ಬಳಿ ಸೋಮವಾರ ಪ್ರತಿಭಟನೆ ನಡೆಸಿದರು.

ಈ ತಿಂಗಳ 1ರಂದು ತಿಪ್ಪಟೂರಿನಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಎತ್ತಿನ ಬಂಡಿ, ಟ್ರಾಕ್ಟರ್‌ನೊಂದಿಗೆ ಜಾಥಾವಲ್ಲಿ ಆಗಮಿಸಿದ ರೈತರು ಪ್ರತಿಭಟನೆ ಆರಂಭಿಸಿದರು.

ರಾಜ್ಯ ರೈತ ಸಂಘ, ರೈತ ಶಕ್ತಿ ಸಂಘಟನೆ ಜಿಲ್ಲಾಧ್ಯಕ್ಷ ಎನ್. ಪದ್ಮನಾಭ ಮಾತನಾಡಿ, ಈ ಬಾರಿ ಜಿಲ್ಲೆಯಲ್ಲಿ ಮಳೆ ಇಲ್ಲದೆ ತೀವ್ರ ಬರಗಾಲವಿದೆ, ರೈತರು ಬೀಜ ಬಿತ್ತನೆ ಮಾಡಲಾಗಿಲ್ಲ. ಮಾಡಿದ್ದ ಅಲ್ಪಸ್ವಲ್ಪ ಬಿತ್ತನೆಯೂ ನಾಶವಾಗಿದೆ. ರೈತರ ಬೆನ್ನೆಲುಬಾಗಿರುವ ದನಕರುಗಳಿಗೆ ಮೇವಿಲ್ಲದೆ ರೈತ ಕುಟುಂಬ ಸಂಕಷ್ಟಕ್ಕೆ ಸಿಲುಕಿದೆ. ಇಂತಹ ಪರಿಸ್ಥಿತಿಯಲ್ಲಿ ನೆರವಾಗಬೇಕಾಗಿದ್ದ ಸರ್ಕಾರ ರೈತರಿಗೆ ಸ್ಪಂದಿಸದೆ ಕಡೆಗಣಿಸಿದೆ ಎಂದು ಆರೋಪಿಸಿದರು.

ಬೆಳೆ ನಷ್ಟ ಆನುಭವಿಸಿದ ರೈತರಿಗೆ ಪ್ರತಿ ಎಕರೆಗೆ ಕನಿಷ್ಠ 25 ಸಾವಿರ ರೂ. ಪರಿಹಾರ ನೀಡಬೇಕು. ದನಕರುಗಳನ್ನು ಉಳಿಸಿಕೊಳ್ಳಲು ಎಲ್ಲಾ ಹೋಬಳಿ ಕೇಂದ್ರಗಳಲ್ಲಿ ಮೇವು ಬ್ಯಾಂಕ್ ಸ್ಥಾಪನೆ ಮಾಡಿ, ಮೇವು ವಿತರಣೆ ಮಾಡಬೇಕೂ.

ರೈತರು ತಮ್ಮ ತೋಟದ ಬೆಳೆ ಕಾಪಾಡಿಕೊಳ್ಳಲು ಕೊಳವೆಬಾವಿಗಳ ಮೂಲಕ ನೀರು ಹೊರೈಸಿಕೊಳ್ಳಲು ನಿಯಮಿತವಾಗಿ ವಿದ್ಯುತ್ ಸರಬರಾಜು ಮಾಡಬೇಕು. ಇಂತಹ ಪರಿಸ್ಥಿತಿಯಲ್ಲಿ ಯಾವ ರೈತರೂ ಸಾಲ ಮರುಕಾವತಿ ಮಾಡಲಾಗುವುದಿಲ್ಲ. ಸರ್ಕಾರ ರೈತರ ಎಲ್ಲಾ ಮಾದರಿಯ ಸಾಲವನ್ನು ಮನ್ನಾ ಮಾಡಬೇಕು ಎಂಯ ಎನ್. ಪದ್ಮನಾಭ ಒತ್ತಾಯಿಸಿದರು.

ತಿಪಟೂರು ತಾಲ್ಲೂಕು ಅಧ್ಯಕ್ಷ ಎ.ಎಸ್. ಈಶ್ವರ್ ಮಾತನಾಡಿ, ಬರ ಪರಿಸ್ಥಿತಿಯಲ್ಲಿ ಸರ್ಕಾರ ರೈತರ ನೆರವಿಗೆ ಬರಬೇಕು. ವೈಜ್ಞಾನಿಕ ಪರಿಹಾರ ನೀಡಬೇಕು. ರೈತರ ಜಾನುವಾರುಗಳಿಗೆ ಮೇವು ಹೊರೈಕೆ ಮಾಡಲು ಹೋಬಳಿ ಕೇಂದ್ರಗಳಲ್ಲಿ ತಕ್ಷಣ ಮೇವು ವಿತರಣಾ ಕೇಂದ್ರಗಳನ್ನು ಆರಂಭಿಸಿ, ಮೇವು ಒದಗಿಸಬೇಕು. ಪ್ರಮುಖವಾಗಿ ಗ್ರಾಮೀಣ ಪ್ರದೇಶದಲ್ಲಿ ಎದುರಾಗಿರುವ ವಿದ್ಯುತ್ ಹೊರೈಕೆ ವ್ಯತ್ಯಯ ಸರಿಪಡಿಸಿ, ನಿತ್ಯ ಕನಿಷ್ಠ ಏಳು ಗಂಟೆ ಕಾಲ ಗುಣಮಟ್ಟದ ವಿದ್ಯುತ್ ಸರಬರಾಜು ಮಾಡಬೇಕು ಎಂದು ಆಗ್ರಹಿಸಿದರು.

ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ರಾಷ್ಟ್ರೀಕೃತ ಬ್ಯಾಂಕ್‌ಗಳ ರೈತರ ಸಾಲವನ್ನು ಸಂಪೂರ್ಣ ಮನ್ನಾ ಮಾಡಬೇಕು. ಅರಣ್ಯ ಪ್ರದೇಶದ ಸುತ್ತಲಿನ ರೈತರನ್ನು ಒಕ್ಕಲೆಬ್ಬಿಸುವ ಪ್ರಯತ್ನ ನಿಲ್ಲಿಸಬೇಕು, ಇಲ್ಲಿನ ರೈತರಿಗೆ ಅರಣ್ಯಾಧಿಕಾರಿಗಳು ನೀಡಿರುವ ನೋಟಿಸ್‌ಗಳನ್ನು ವಾಪಸ್ ಪಡೆಯಬೇಕು. ಬೇಡಿಕೆಗಳನ್ನು ಈಡೇರಿಸಲು ಸರ್ಕಾರ ನಿರ್ಲಕ್ಷಿಸಿದರೆ ಹೋರಾಟ ತೀವ್ರಗೊಳಿಸಿ ವಿಧಾನಸೌಧ ಚಲೋ ಕಾರ್ಯಕ್ರಮ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಎ.ಎಸ್. ಈಶ್ವರ್ ಎಚ್ಚರಿಕೆ ನೀಡಿದರು.

ಪ್ರತಿಭಟನಾಕಾರರನ್ನು ಬೆಂಬಲಿಸಿ ಹೋರಾಟದಲ್ಲಿ ಭಾಗಿಯಾಗಿದ್ದ ಬಿಜೆಪಿ ರೈತ ಮೋರ್ಚಾ ಜಿಲ್ಲಾಧ್ಯಕ್ಷ ಸತ್ಯಮಂಗಲ ಜಗದೀಶ್ ಮಾತನಾಡಿ, ಬರ ಪರಿಸ್ಥಿತಿ ಬಗ್ಗೆ ಮಾಹಿತಿ ಅಧ್ಯರೂಗ ಸರ್ಕಾರ ಎಚ್ಚೆತ್ತುಕೊಂಡು ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಂಡಿಲ್ಲ ಸರಿಯಾದ ರೀತಿಯಲ್ಲಿ ಬರ ಪರಿಹಾರ ಕಾರ್ಯಕ್ರಮಗಳು ಆರಂಭವಾಗಿಲ್ಲ. ಸರ್ಕಾರಕ್ಕೆ ರೈತರ ಕಷ್ಟಗಳು ಬೇಕಾಗಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು. ಮಂಡಳಾಧ್ಯಾತವಾಗಿ ಸರ್ಕಾರ ಹಾಗೂ ಜಿಲ್ಲಾಡಳಿತ ಕೆರೆಗಳಿಗೆ ಹೇಮಾವತಿ ನೀರು ಹರಿಸದ್ದರೆ ಅಂತರ್ಜಲಮಟ್ಟ ಸುಧಾರಣೆಯಾಗಿ ಕೊಳವೆಬಾವಿಗಳು ಬಲಾಯವ್ಯತವಾಗಿರುತ್ತಿದ್ದವ

ಸಣ್ಣ ಸುದ್ದಿ

ದೊರೆಯಲಿದೆ ಎಂಬ ನಿರೀಕ್ಷೆಯೂ ಇದೆ ಎಂದರು.

ಕಳೆದ ಬಾರಿ ಪರಿಹಾರಕ್ಕಾಗಿ ರಾಜ್ಯ ಸರ್ಕಾರ ಸುಪ್ರೀಂ ಕೋರ್ಟ್ ಮೊರೆ ಹೋಗಿ ನಿರ್ದೇಶನ ಪಡೆಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿತ್ತು ಈ ಬಾರಿ ಅಂತಹ ಪರಿಸ್ಥಿತಿ ಎದುರಾಗುವುದಿಲ್ಲ ಎಂಬ ವಿಶ್ವಾಸವಿದೆ ಎಂದು ತಿಳಿಸಿದರು.

1 ನೇ ಪುಟದಿಂದ

ತುಮಕೂರು ನಗರಕ್ಕೆ ಜನವರಿವರೆಗೆ ಮಾತ್ರ ನೀರು; ತುರ್ತು ಪರ್ಯಾಯ ವ್ಯವಸ್ಥೆಗೆ ಸೂಚನೆ : ತುಮಕೂರು ಜಿಲ್ಲೆಯಲ್ಲಿ ಬರ ನಿರ್ವಹಣೆ ಕುರಿತು ನಿರಂತರವಾಗಿ ಅಧಿಕಾರಿಗಳಿಗೆ ಸೂಚನೆಗಳನ್ನು ನೀಡಲಾಗುತ್ತಿದೆ. ಮಾದರಿ ನೀತಿ ಸಂಹಿತೆ ಜಾರಿಯಲ್ಲಿದ್ದರೂ ಬರ ನಿರ್ವಹಣೆಗೆ ಸಂಬಂಧಿಸಿದ ಸಭೆ ನಡೆಸಲು ಅಥವಾ ಅಗತ್ಯಕ್ರಮ ಕೈಗೊಳ್ಳಲು ಯಾವುದೇ ಅಡಚಣೆ ಇಲ್ಲ. ಇದೇ ಹಿನ್ನೆಲೆಯಲ್ಲಿ ಇಂದು ಅಧಿಕಾರಿಗಳ ಸಭೆ ನಡೆಸಲಾಗಿದೆ ಎಂದು ಹೇಳಿದರು. ತುಮಕೂರು ನಗರ ಮತ್ತು ಜಿಲ್ಲೆಯ ಕೆಲವು ಪ್ರದೇಶಗಳಿಗೆ ಕುಡಿಯುವ ನೀರಿನ ಪ್ರಮುಖ ಮೂಲ ಹೇಮಾವತಿ ನದಿಯಾಗಿದೆ. ಈಗಾಗಲೇ ಎರಡನೇ ಬಾರಿಗೆ ಹೇಮಾವತಿಯಿಂದ ನೀರು ಹರಿಸಲಾಗಿದೆ. ಆದರೆ ಪ್ರಸ್ತುತ ಲಭ್ಯವಿರುವ ನೀರಿನ ಪ್ರಮಾಣವನ್ನು ಗಮನಿಸಿದರೆ ತುಮಕೂರು ನಗರಕ್ಕೆ ಜನವರಿವರೆಗೆ ಮಾತ್ರಕುಡಿಯುವ ನೀರು ಪೂರೈಸಲು ಸಾಧ್ಯವಾಗಬಹುದು ಎಂದು ಆತಂಕ ವ್ಯಕ್ತಪಡಿಸಿದರು.

ನೀರನ್ನು ಮಿತವಾಗಿ ಬಳಸಿ; ಮೇ ತಿಂಗಳವರೆಗೆ ಪರಿಸ್ಥಿತಿ ಸಹಾನಿಸಬ್ಬಾಗುಬಹುದು : ನೀರಿನ ಬಳಕೆಗೆ ಕಟ್ಟುನಿಟ್ಟಿನ ಮಾರ್ಗಸೂಚಿ ರೂಪಿಸುವುದಕ್ಕಿಂತ ಜನರ ಮೂಲಭೂತ ಕುಡಿಯುವ ನೀರಿನ ಅಗತ್ಯವನ್ನು ಪೂರೈಸುವುದು ಸರ್ಕಾರದ ಮೊದಲ ಆದ್ಯತೆ ಎಂದು ಡಾ. ಶರಮೇಶ್ವರ ಹೇಳಿದರು.

ರಾಜ್ಯದ ಜನರು ನೀರನ್ನು ಅತ್ಯಂತ ಮಿತವಾಗಿ ಬಳಸಬೇಕು. ವಾಹನಗಳನ್ನು ತೊಳೆಯಲು, ಅಗತ್ಯವಾಗಿ ಹೆಚ್ಚಿನ ನೀರು ಬಳಸಲು ಸಾಧ್ಯವಾದಷ್ಟು ಕಡಿತಗಾಣ ಹಾಕಬೇಕು. ಮನೆಯ ದಿನನಿತ್ಯದ ಬಳಕೆಯಲ್ಲಿಯೂ ನೀರನ್ನು ಉಳಿತಾಯ ಮಾಡುವ ಮೂಲಕ ಜನರು ಸರ್ಕಾರದೊಂದಿಗೆ ಸಹಕರಿಸಬೇಕು ಎಂದು ಮನವಿ ಮಾಡಿದರು.

ಹವಾಮಾನ ಇಲಾಖೆಯ ಮಾಹಿತಿಯ ಪ್ರಕಾರ ಮುಂದಿನ ಹುಲವು ತಿಂಗಳುಗಳವರೆಗೆ ಸಮರ್ಪಕ ಮಳೆಯ ಸಾಧ್ಯತೆ ಕಡಿಮೆ ಇರುವ ಹಿನ್ನೆಲೆಯಲ್ಲಿ ಪರಿಸ್ಥಿತಿ ಇನ್ನಷ್ಟು ಗಂಭೀರವಾಗಬಹುದು. ಈ ಕಾರಣದಿಂದ ಈಗಿರುವ ನೀರಿನ ಸಂಪನ್ಮೂಲವನ್ನು ಅತ್ಯಂತ ಜಾಗರೂಕತೆಯಿಂದ ಬಳಸುವುದು ಅನಿವಾರ್ಯ ಎಂದು ಹೇಳಿದರು.

ಬರ ನಿರ್ವಹಣೆ ಕೇವಲ ಸರ್ಕಾರದ ಜವಾಬ್ದಾರಿ ಮಾತ್ರವಲ್ಲ, ಸಾರ್ವಜನಿಕರ ಸಹಕಾರವೂ ಅತ್ಯೆ ಮುಖ್ಯ ಪ್ರತಿಯೊಬ್ಬರೂ ತಮ್ಮ ಮಟ್ಟದಲ್ಲಿ ನೀರಿನ ಸಂರಕ್ಷಣೆ ಮತ್ತು ಮಿತ ಬಳಕೆಗೆ ಆದ್ಯತೆ ನೀಡಬೇಕು ಎಂದು ಮನವಿ ಮಾಡಿದರು.

33 ವಾರಗಳಿಗೆ ಸಾಕಾಗುವ ಮೇವು ಲಭ್ಯ; ಜಾನುವಾರುಗಳು ರೈತರ ಆಸ್ತಿಯಾಗಿವೆ. ಅವುಗಳನ್ನು ರಕ್ಷಿಸುವುದು ಸರ್ಕಾರದ ಪ್ರಮುಖ ಆದ್ಯತೆ. ಎರಡು ತಿಂಗಳ ಹಿಂದೆಯೇ ರೈತರಿಗೆ ಮೇವು ಬೀಜದ ಕಿಟ್‌ಗಳನ್ನು ವಿತರಿಸಲಾಗಿದ್ದು ಈಗ ಅವುಗಳಿಂದ ಬೆಳೆದ ಮೇವು ಬಳಕೆಗೆ ಬರುವ ಹಂತದಲ್ಲಿದೆ. ಜೋಳ ಸೇರಿದಂತೆ ಮೇವು ಬೆಳೆಗಳು ಮೂರು–ನಾಲ್ಕು ಅಡಿಯಷ್ಟು ಬೆಳೆದಿದ್ದು ಮುಂದಿನ ದಿನಗಳಲ್ಲಿ ಅವು ರೈತರಿಗೆ ನೆರವಾಗಲಿವೆ ಎಂದು ತಿಳಿಸಿದರು.



ಬಿಜೆಪಿ ರೈತ ಮೋರ್ಚಾ ರಾಜ್ಯ ಕಾರ್ಯಕಾರಿಣಿ ಸದಸ್ಯ ಸ್ನೇಕ್ ನಂದೀಶ್ ಮಾತನಾಡಿ, ರಾಜ್ಯದಲ್ಲಿ ಭೀಕರ ಬರವಿದ್ದರೂ ಸರ್ಕಾರ ರೈತರ ನೆರವಿಗೆ ಬಂದಿಲ್ಲ, ಜಾನುವಾರುಗಳ ಮೇವಿನ ವ್ಯವಸ್ಥೆ ಮಾಡಿಲ್ಲ ಎಂದು ಆರೋಪಿಸಿದ ಅವರು, ಸರ್ಕಾರ ರೈತರ ಎಲ್ಲಾ ಸಾಲ ಮನ್ನಾ ಮಾಡಬೇಕು ಎಂದು ಒತ್ತಾಯಿಸಿದರು. ಸಂಘದ ಜಿಲ್ಲಾ ಉಪಾಧ್ಯಕ್ಷ ಪರಮೇಶ್ವರ್, ಕಾರ್ಯದರ್ಶಿ ಶ್ರೀಧರ್, ಮುಖಂಡರಾದ ಮಣಿಸೂರು ವಿನಯ್, ಹಾಲೇನಹಳ್ಳಿ ದಿಲೀಪ್, ಗುರುಮೂರ್ತಿ, ಭಾರತೀಯ ಕಿಸಾನ್ ಸಂಘದ ಜಿಲ್ಲಾಧ್ಯಕ್ಷ ವಿಯಯಕುಮಾರ್, ಬಿ.ಎಲ್. ಮಂಜುನಾಥ್, ತ್ಯಾಗಟೂರು ವಸಂತ, ವಿಶ್ವಜ್ಞ, ಪಡಕ್ಕಲಿ, ನಂದೀಶಪ್ಪ, ಸಿದ್ಧರಾಮಯ್ಯ ಮೊದಲಾದವರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

"ಅಂಗವಿಕಲ ಶಿಕ್ಷಕನಿಗೆ ಜಾತಿನಿಂದನೆ, ಪ್ರಾಣ ಬೆದರಿಕೆ ಆರೋಪ

ಸೂರ್ಯಪ್ರಗತಿನ್ಯೂಸ್.ಕಾಂ

ತಿಪಟೂರು.: ಅಂಗವಿಕಲ ಶಿಕ್ಷಕನೊಬ್ಬರಿಗೆ ಜಾತಿ ನಿಂದನೆ ಮಾಡಿ, ಅವಮಾನಕರವಾಗಿ ಮಾತನಾಡುವುದರ ಜೊತೆಗೆ ಪ್ರಾಣ ಬೆದರಿಕೆ ಹಾಕಲಾಗಿದೆ ಎಂಬ ಆರೋಪ ಕೇಳಿಬಂದಿದೆ.

ಪರಿಶಿಷ್ಟ ಜಾತಿಗೆ ಸೇರಿದ ಹಾಗೂ ಅಂಗವಿಕಲರಾಗಿರುವ ಶಿಕ್ಷಕರಾದ ಸಿದ್ದೇಶ್ವರ ಜಿಎಂ ರವರಿಗೆ ಹದವೀಧರ ಶಿಕ್ಷಕರ ಚುನಾವಣೆಯ ನಿಮಿತ್ತ ಮಾತನಾಡುವ ಸಂದ ಭೀದಲ್ಲಿ ಸೌಕರದ ಸಂಘದ ಉಪಾಧ್ಯಕ್ಷರು ಆಗಿರುವ ಉಮೇಶ್. ಎಚ್.ಆರ್., ನಾಗರ ಘಟ್ಟ ಪ್ರಾಥಮಿಕ ಶಾಲಾ ಶಿಕ್ಷಕರು ಹಾಗೂ ಚುನಾವಣಾ ಅಧಿಕಾರಿ ಚನ್ನೇಗೌಡ ಮತ್ತಿತರರು ಮಾತನಾಡುವ ಸಂದರ್ಭದಲ್ಲಿ ಹದವೀಧರ ಶಿಕ್ಷಕ ಕ್ಷೇತ್ರದ ಅಧ್ಯಕ್ಷರು ಆಗಿರುವ ಅಂಗವಿಕಲ ಸಿದ್ದೇಶ್ವರ ಬೆಂಬಲಿಸುವಂತೆ ಜಾತಿ ನಿಂದನೆ ಮಾಡಿ ಹಾಕಿದ ಆಡಿಯೋ ಸಾಮಾಜಿಕ ಜಾಲತಾಣದಲ್ಲಿ ಹರಿದಾಡಿದ್ದು ಜಾತಿ ನಿಂದನೆ ಮಾಡಲಾಗಿದೆ ಎಂದು ಆರೋಪಿ ಸಲಾಗಿದೆ. ಇದಂದಾಗಿ ಶಿಕ್ಷಕರು ಮಾನಸಿಕ ವಾಗಿ ತೀವ್ರವಾಗಿ ನೊಂದಿದ್ದಾರೆ ಎನ್ನಲಾಗಿದೆ. ಅಲ್ಲದೆ, ಘಟನೆಗೆ ಸಂಬಂಧಿಸದ ವ್ಯಕ್ತಿಗಳು ಬೆದರಿಕೆ ಹಾಕಿದ್ದಾರೆ ಎಂದು ಆರೋಪವೂ ಕೇಳಿಬಂದಿದೆ.

ಘಟನೆ ಕುರಿತು ಸಂಬಂಧಪಟ್ಟ ಶಿಕ್ಷಣ ಇಲಾಖೆಯ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ದೂರು ನೀಡಲಾಗಿದ್ದು ಪ್ರಕರಣದ ಕುರಿತು ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಶಿಕ್ಷಕರು ಹಾಗೂ ಅವರ ಪರವಾಗಿರು ವವರು ಒತ್ತಾಯಿಸುತ್ತಿದ್ದಾರೆ.ಚುನಾವಣೆಗೆ ಅಕ್ಷಯ. ಹದವೀಧರ ಪ್ರಾಥಮಿಕ ಶಿಕ್ಷಣ ಕ್ಷೇತ್ರದ ಚುನಾವಣೆಯಲ್ಲಿ ಅಕ್ರಮ ನಡೆದಿದೆ ಎಂದು ಶಿಕ್ಷಕರು ಆರೋಪಿಸಿದ್ದಾರೆ.ಅಂಗವಿಕಲರು ಹಾಗೂ ಪರಿಶಿಷ್ಟ ಜಾತಿಗೆ ಸೇರಿದ ವ್ಯಕ್ತಿಗಳ ಘನತೆ ಮತ್ತು ಸುರಕ್ಷತೆಗೆ ಧಕ್ಕೆಯುಂಟಾಗುವ ಯಾವುದೇ ಕೃತ್ಯಗಳನ್ನು ಗಂಭೀರವಾಗಿ ಪರಿಗಣಿಸಬೇಕು ಘಟನೆಗೆ ಸಂಬಂಧಿಸಿದಂತೆ ಅಧಿಕಾರಿಗಳು ನಿಷ್ಪಕ್ಷಪಾತ ತನಿಖೆ ನಡೆಸಿ ಸತ್ಯಾಸತ್ಯತೆ ಬಹಿರಂಗಪಡಿಸಬೇಕು ಹಾಗೂ ಶಿಕ್ಷಕನಿಗೆ ಆಗಿರುವ ಮಾನಸಿಕ ನೋವು ಹಾಗೂ ಪರಿಶಿಷ್ಟ ಜಾತಿಗೆ ಅವಮಾನಿಸುವವರ ವಿರುದ್ಧ ಕಾನೂನು ಕ್ರಮಗಳನ್ನು ಕೈಗೊಳ್ಳಬೇಕು ವ್ಯಕ್ತವಾಗಿದೆ. ಎಂದು ಆಗ್ರಹ"

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ತುಮಕೂರು ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತ, ಜಿ.ಪಂ., ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ, ಕರ್ನಾಟಕ ಅಥ್ಲೆಟಿಕ್ ಸಂಸ್ಥೆ ಹಾಗೂ ಜಿಲ್ಲಾ ಅಥ್ಲೆಟಿಕ್ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ರಾಜ್ಯ ಕಿರಿಯ ಅಥ್ಲೆಟಿಕ್ ಕ್ರೀಡಾಕೂಟ ನಡೆಯಿತು.

ಮಾಹಿತಿ ಹಕ್ಕು ಕಾಯ್ದೆ–2005 ಸಾರ್ವಜನಿಕರಿಗೆ ಒಂದು ಪ್ರಬಲ ಆಸ್ತ್ರ

ತುಮಕೂರು:ಕಾರ್ಯಾಂಗ, ಶಾಸಕಾಂಗ ಮತ್ತು ನ್ಯಾಯಾಂಗದ ಧ್ರುವ್ರಾಜಾರಗಳನ್ನು ಬಂಯಂಲಿಗೆಯಿಂದ ನಿಟ್ಟಿನಲ್ಲಿ ಮಾಹಿತಿ ಹಕ್ಕು ಕಾಯ್ದೆ–2005 ಸಾರ್ವಜನಿಕರಿಗೆ ಒಂದು ಪ್ರಬಲ ಆಸ್ತ್ರವಾಗಿದ್ದು, ಇದರ ಸರಿಯಾದ ಬಳಕೆಕಂತೆತಂತೆ ತುಮಕೂರು ಜಿಲ್ಲಾ ಮಾಹಿತಿ ಹಕ್ಕು ಕಾರ್ಯಕರ್ತರ ವೇದಿಕೆ(ರಿ), ಶೀಘ್ರದಲ್ಲಿಯೇ ಆಸಕ್ತರಿಗೆ ಕಾರ್ಯಾಗಾರ ನಡೆಸಲಿದೆ ಎಂದು ವೇದಿಕೆಯ ರಾಜ್ಯಾಧ್ಯಕ್ಷ ಹನುಮಂತರಾಯಪ್ಪ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿಂದು ಮಾಹಿತಿ ಹಕ್ಕು ಹೋರಾಟಗಾರ ಅರ್ಜನ್ ಮುಳೆ ಆವರ ಸಿದ್ದಹಡಿಸಿರುವ ಹಾರದರ್ಶಕತೆ, ಹೊಣೆಗಾರಿಕೆ ಮತ್ತು ಸಾರ್ವಜನಿಕ ಹಕ್ಕುಗಳಿಗಾಗಿ ಮಾರ್ಗದರ್ಶಿ ಕೈಪಿಡಿ ಬಿಡುಗಡೆ ಮಾಡಿ ಮಾತನಾಡಿದ ಅವರು,ಎಲ್ಲಾ ರೈತರ ಮಕ್ಕಳು ಸೇರಿ,ಈ ಸಂಸ್ಥೆಯನ್ನು ಹುಟ್ಟು ಹಾಕಿದ್ದು,ಭಾರತ ಸರಕಾರದಲ್ಲಿ ನೊಂದಾಯಿತ ಸಂಸ್ಥೆಯಾಗಿದೆ. ಜನಸಾಮಾನ್ಯರಿಗೆ ಅಧಿಕಾರಿಗಳಿಂದ ಆಗುವ ತೊಂದರೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಕೆಲಸ ಮಾಡುವುದೇ ವೇದಿಕೆ ಉದ್ದೇಶವಾಗಿದೆ ಎಂದರು.

ತುಮಕೂರು ಜಿಲ್ಲೆ ಅತಿ ವೇಗವಾಗಿ ಬೆಳವಣಿಗೆಯಾಗುತ್ತಿರುವ ನಗರಗಳಲ್ಲಿ ಒಂದು,ಇಂತಹ ನಗರಗಳಲ್ಲಿಯೇ ಭ್ರಷ್ಟಾಚಾರ ಹೆಚ್ಚಾಗಿ, ಸಾರ್ವಜನಿಕರು, ಅದರಲ್ಲಿಯೂ ಬಡವರು ಹೆಚ್ಚು ಸಂಕಷ್ಟಕ್ಕೆ ಒಳಗಾಗುತ್ತಾರೆ.ಅವರಿಗೆ ನ್ಯಾಯ ಕೊಡಿಸಬೇಕು. ಸರಕಾರದ ಸವಲತ್ತುಗಳ ಜೊತೆಗೆ, ಸಾರ್ವಜನಿಕರ ಕೆಲಸಗಳು ಹಾರದರ್ಶಕವಾಗಿ ನಡೆಯಬೇಕು ಎಂಬ ಉದ್ದೇಶದಿಂದ ಕಳೆದ ಎರಡು ವರ್ಷಗಳಿಂದ ತುಮಕೂರು ಜಿಲ್ಲೆಯಲ್ಲಿ ತುಮಕೂರು ಜಿಲ್ಲಾ ಮಾಹಿತಿ ಹಕ್ಕು ಕಾರ್ಯಕರ್ತರ ವೇದಿಕೆ ಕೆಲಸ ಮಾಡಿಕೊಂಡು ಬರುತ್ತಿದೆ.ಶಿಕ್ಷಣ, ಆರೋಗ್ಯ,ಮೂಲಭೂತ ಸೌಕರ್ಯ ಇವುಗಳ ವೇದಿಕೆಯ ಅದ್ಯತೆಯ ವಿಷಯಗಳಾಗಿದ್ದು, ಗ್ರಾಮೀಣ, ನಗರದ ಎನ್ನದೆ ಎಲ್ಲೇ ಸಾರ್ವಜನಿಕರಿಗೆ ತೊಂದರೆಯಾಗಿದ್ದು ನಮ್ಮ ಗಮನಕ್ಕೆ ಬಂದರೆ, ಅವರ ಪರವಾಗಿ ಆರ್.ಟಿ.ಐ ಮೂಲಕ ಮಾಹಿತಿ ಕಲೆ ಹಾಕಿ,ಹಕ್ಕುಗಳನ್ನು ಅಧಿಕಾರಿಗಳ ಮುಂದಿಟ್ಟು, ಸಂತ್ರಸ್ತರಿಗೆ ನ್ಯಾಯ ದೊರೆಯುವವರೆಗೂ ಯಾವ ಪ್ರತಿಫಲಾಪೇಕ್ಷೆ ಇಲ್ಲದೆ ಹೋರಾಟ ನಡೆಸಲಿದೆ ಎಂದು ಹನುಮಂತರಾಯಪ್ಪ ತಿಳಿಸಿದರು.

ತುಮಕೂರು ಜಿಲ್ಲಾ ಮಾಹಿತಿ ಹಕ್ಕು ಕಾರ್ಯಕರ್ತರ ವೇದಿಕೆಯ ಮಹಿಳಾ ಅಧ್ಯಕ್ಷ ಸುಮ ಮಾತನಾಡಿ,ನಮ್ಮ ಸಮಿತಿವತಿಯಿಂದ ಈಗಾಗಲೇ ಚಿಕ್ಕನಾಯಕನಹಳ್ಳಿ ತೀರ್ಥಪುರ ಗ್ರಾಮ ಮತ್ತು ಗೋಡೆಕೆರೆ ಗ್ರಾಮಪಂಚಾಯಿತಿಗಳಲ್ಲಿ ಸೂರು ಇಲ್ಲದ ಪರದಾಡುತಿದ್ದ ಬಡವರಿಗೆ ಕಾನೂನು ಬದ್ದವಾಗಿ ಹಕ್ಕುಪತ್ರಕುಡಿಯುವ ನೀರು ಒದಗಿಸುವ ಕೆಲಸ ಆಗಿದೆ. ಅಲ್ಲದೆ ಮಕ್ಕಳಿಗೆ ಶಿಕ್ಷಣಕ್ಕೂ ಅವಕಾಶ ಕಲ್ಪಿಸಲಾಗಿದೆ.ಹತ್ತಾರು ವರ್ಷಗಳಿಂದ ಆಗದ ಕೆಲಸವನ್ನು ಕೆಲವೇ ದಿನಗಳಲ್ಲಿ ದೊರೆಯುವಂತೆ ಮಾಡಿದೆ.ಮುಂದಿನ ದಿನಗಳಲ್ಲಿ ಜಿಲ್ಲಾ ಮಟ್ಟದಲ್ಲಿಯೂ ಹೋರಾಟ ರೂಪಿಸಲಾಗುವುದು ಎಂದರು.

ತುಮಕೂರು ಜಿಲ್ಲಾ ಮಾಹಿತಿ ಹಕ್ಕು ಕಾರ್ಯಕರ್ತರ ವೇದಿಕೆಯ ಸಂಚಾಲಕ ರವಿ.ಎಸ್.,ಮಹಿಳಾ ಸಂಚಾಲಕರಾದ ರವಿ.ಎಸ್.,ಮಹಿಳಾ ಉಪಾಧ್ಯಕ್ಷರಾದ ದಾಕ್ಷಾಯಣಮ್ಮ,ರವಿ ಅವರುಗಳು ಉಪಸ್ಥಿತರಿದ್ದರು.

ಮಕ್ಕಳಿಗೆ ಅಂಕಗಳಿಕೆಗಿಂತ ಸಂಸ್ಕಾರ ಮತ್ತು ಮಾನವೀಯ ಮೌಲ್ಯಗಳ ಬೆಳೆಸುವ ಶಿಕ್ಷಣ ಅಗತ್ಯ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು– ಮಕ್ಕಳಿಗೆ ಅಂಕ ಗಳಿಗಿಂತ ಸಂಸ್ಕಾರ ಮತ್ತು ಮಾನವೀಯ ಮೌಲ್ಯಗಳ ಬೆಳೆಸುವ ಶಿಕ್ಷಣ ಅಗತ್ಯವಿದೆ ಎಂದು ಗ್ರಾಮಾಂತರ ಕ್ಷೇತ್ರದ ಶಾಸಕ ಬಿ. ಸುರೇಶ್‌ಗೌಡ ಅಭಿಪ್ರಾಯ ವ್ಯಕ್ತಪಡಿಸಿದರು.ತಾಲ್ಲೂಕಿನ ಊರ್ಡಿಗೆರೆ ಹೋಬಳಿಯ ಗೊಲ್ಲಹಳ್ಳಿ ಬಳಿ ಇರುವ ಜವಾಹರ್ ನವೋದಯ ವಿದ್ಯಾಲಯದಲ್ಲಿ ಕೇಂದ್ರ ಸರ್ಕಾರ "ಏಕ್ ಪೇಡ್ ಮಾ ಕೆ ನಾಮ್" ಅಭಿಯಾನದಡಿ ಹಮ್ಮಿಕೊಳ್ಳಲಾಗಿದ್ದ ಅಮೃತ ಹೆಸರಲ್ಲಿ ಗಿಡ ನೆಡುವ ಕಾರ್ಯಕ್ರಮ ಹಾಗೂ ಔಷಧೀಯ ಸಸ್ಯಗಳ ಉದ್ಯಾನವನ ಉದ್ಘಾಟನಾ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಅವರು ಮಾತನಾಡಿದರು.

ಅಂಕ ಗಳಿಸುವುದೇ ಶಿಕ್ಷಣದ ಗುರಿಯಲ್ಲ, ಮಾನವೀಯ ಮೌಲ್ಯಗಳನ್ನು ಅಳವಡಿಸಿಕೊಂಡು ಸಂಸ್ಕಾರವಂತರಾಗಿ ಬಾಳುವುದು ನಿಜವಾದ ಶಿಕ್ಷಣ ಎಂದು ಅವರು ಹೇಳಿದರು. ವಿದ್ಯಾರ್ಥಿಗಳು ಕೇವಲ ಅಂಕಗಳಿಕೆಯ ಹಿಂದೆ ಬೀಳದೆ ಶಿಸ್ತು, ಶ್ರಾಮಾಣಿಕತೆ ಮತ್ತು ಸಮಯಪಾಲನೆಯಂತಹ ಜೀವನ ಮೌಲ್ಯಗಳ ಅಳವಡಿಸಿಕೊಳ್ಳಬೇಕು. ಉದ್ಯೋಗಕ್ಕೆ ಕೇವಲ ಅಂಕ ಗಳಿಕೆ ಹಾಗೂ ಪ್ರತಿಭೆಯೇ ಮಾನದಂಡವಲ್ಲ. ಇದರಜತೆಗೆ ಶ್ರಾಮಾಣಿಕತೆ, ಕೌಶಲ್ಯವೂ ಮುಖ್ಯವೆಂದರು. ಮಕ್ಕಳು ಶಿಕ್ಷಣದಂತರಾಗುವುದರ ಜತೆಗೆ ಉತ್ತಮ ನಾಗರಿಕರಾಗಿ ಸಾಧನೆ ಮಾಡಬೇಕು ಎಂದು ಕರೆ

ನೀಡಿದ ಅವರು, ಪೋಷಕರು ತಮ್ಮ ಮಕ್ಕಳ ಆಸಕ್ತಿ ಹಾಗೂ ಆಶಯಗಳನ್ನು ಅರಿತು, ಬಾಲ್ಯದಿಂದಲೇ ಶ್ರಮ ಗೌರವದಂತಹ ಗುಣಗಳನ್ನು ಕಲಿಸಿಕೊಡುವ ಮೂಲಕ ಸೂಕ್ತ ಮಾರ್ಗದರ್ಶನ ನೀಡಬೇಕು ಎಂದರು.

ನವೋದಯ ವಿದ್ಯಾಲಯವು ಸಂಸ್ಕೃತಿ ಮತ್ತು ಸಂಸ್ಕಾರಾಧಾರಿತ ಗುಣಮಟ್ಟದ ಶಿಕ್ಷಣದೊಂದಿಗೆ ವಿದ್ಯಾರ್ಥಿಗಳಿಗೆ ಅತ್ಯುತ್ತಮ ಮಾರ್ಗದರ್ಶನ ನೀಡುತ್ತಿದ್ದು, ಶ್ರಾಂಕುಶಾಲರು ಹಾಗೂ ಶಿಕ್ಷಕರ ಕಾರ್ಯ ಶ್ಲಾಘನೀಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು

ನವೋದಯ ವಿದ್ಯಾಲಯದ ಮಾದರಿಯಲ್ಲೇ ತುಮಕೂರು ಗ್ರಾಮಾಂತರ ಕ್ಷೇತ್ರ ವ್ಯಾಪ್ತಿಯಲ್ಲಿ ಸಿಎಸ್‌ಆರ್ ನಿಧಿ ಹಾಗೂ ಶಾಸಕರ ಅನುದಾನವನ್ನು ಬಳಸಿಕೊಂಡು ಎಲ್ಲ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಸಂಕಲ್ಪ ಮಾಡಿರುವುದಾಗಿ ಅವರು ತಿಳಿಸಿದರು.ದೇಶಾದ್ಯಂತ ಅಮೃತ ಹೆಸರಲ್ಲಿ ಒಂದು ಗಿಡ ನೆಡುವುದು ಪ್ರಧಾನಿ ನರೇಂದ್ರ ಮೋದಿಯವರ ಸಂಕಲ್ಪವಾಗಿದೆ. ಪ್ರಧಾನಿ ಮೋದಿಯವರ ಸಂಕಲ್ಪವನ್ನು ನವೋದಯ ವಿದ್ಯಾಲಯದಲ್ಲಿ ಈಡೇರಿಸುತ್ತಿರುವುದು ಹೆಮ್ಮೆಯ ಸಂಗತಿ ಎಂದರು.ತಾವು ಕಳೆದ ಒಂದು ವರ್ಷದ ಹಿಂದೆ ಫಿನ್‌ಲ್ಯಾಂಡ್ ದೇಶಕ್ಕೆ ಅಲ್ಲಿನ ಶಾಲೆಗಳ ಬಗ್ಗೆ ಅಧ್ಯಯನ ಮಾಡಲು ಭೇಟಿ ನೀಡಿದ್ದೆ. ಆ ದೇಶದಲ್ಲಿ ಪ್ರಧಾನಿಯಿಂದ ಹಿಡಿದು ಕಾರು ಚಾಲಕನ ಮಕ್ಕಳ ವರೆಗೂ ಒಂದೇ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಾರೆ. ಆದರೆ ನಮ್ಮ ದೇಶದಲ್ಲಿ ಶ್ರೀಮಂತರ ಮಕ್ಕಳು, ಬಡವರ ಮಕ್ಕಳು ಎಂಬ ತಾರತಮ್ಯವಿದೆ. ಇದನ್ನು ಗಮನಿಸಿದರೆ ಭಾರತದಲ್ಲಿ ಶಿಕ್ಷಣ ಪದ್ಧತಿ ಬಹಳಷ್ಟು ಸುಧಾರಿಸಬೇಕಾಗಿದೆ ಎಂದು ಅಬ ಪ್ರಾಯಪಟ್ಟರು.ಶ್ರಾಂಖಶಾಲಾರಾದ ಸುಂದರಕುಮಾರ್ ಮಾತನಾಡಿ, ಪ್ರತ್ಯೆಕಿಯ ಕಾಳಜಿ ಪ್ರತಿಯೊಬ್ಬರಲ್ಲಿ ಮೂಡಿ ಬರಬೇಕು. ವಿದ್ಯಾರ್ಥಿಗಳಲ್ಲಿ ಔಷಧೀಯ ಸಸ್ಯಗಳ ಅರಿವು ಮೂಡಿಸುವುದು ಬಹಳ ಅಗತ್ಯ. ಈ ನಿಟ್ಟಿನಲ್ಲಿ ನಮ್ಮ ವಿದ್ಯಾಲಯದ ಆವರಣದಲ್ಲಿ ಔಷಧೀಯ ಸಸ್ಯಗಳ ಉದ್ಯಾನವನವನ್ನು ಬೆಳೆಸಲು ಯೋಚಿಸಲಾಗಿದೆ ಎಂದರು.

ಪೊಜಕ ಶಿಕ್ಷಕ ಸಮಿತಿಯ ಸದಸ್ಯರಾದ ರಾಜು ಮಾತನಾಡಿ, ವಿದ್ಯಾಲಯ ವಿದ್ಯಾರ್ಥಿಗಳ ಭವಿಷ್ಯಕ್ಕೆ ತಕ್ಕಂತೆ ಉತ್ತಮ ರೀತಿಯಲ್ಲಿ ಶಿಕ್ಷಣವನ್ನು ನೀಡುತ್ತಿದ್ದು, ಪ್ರತ್ಯತ್ವ ದ್ವಿತೀಯ ಪಿಯುಸಿ. ವಿದ್ಯಾರ್ಥಿಗಳಿಗೆ ಸಿಇಟಿ, ಜೆಇಇ, ನೀಟ್ ಸೇರಿದಂತೆ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಅನುವಾಗುವಂತೆ ಕೋಚಿಂಗ್ ವ್ಯವಸ್ಥೆ ಸಹಕಾರ ನೀಡುವಂತೆ ಶಾಸಕ ಸುರೇಶ್‌ಗೌಡರಿಗೆ ಮನವಿ ಮಾಡಿದರು.

ನವೋದಯ ವಿದ್ಯಾಲಯದ ಹಳೆ ವಿದ್ಯಾರ್ಥಿ ಸಂಘದ ಅಧ್ಯಕ್ಷರಾದ ಡಾ. ಪ್ರಭೋಜ್ ಕುಮಾರ್ ಮಾಹನಾಡಿ, ಕಳೆದ 10 ವರ್ಷಗಳಿಂದ ತಾವು ವ್ಯಾಸಂಗ ಮಾಡುತ್ತಿದ್ದಾ

ವರದರಾಜ ಅಲೈಡ್ ಹೆಲ್ತ್ ಸೈನ್ಸ್ ವತಿಯಿಂದ ಒಂಬತ್ತು ದಿನಗಳ ಇಂಡಕ್ಷನ್ ಕಾರ್ಯಕ್ರಮ ಆರೋಗ್ಯ ಸೇವಾ ಕ್ಷೇತ್ರಕ್ಕೆ ಹೊಸ ತಲೆಮಾರಿನ ವೃತ್ತಿಪರರ ಸಿದ್ಧತೆ : ಪ್ರೊ. ರಾಹುಲ್

ತುಮಕೂರು: ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಹಾಗೂ ವೃತ್ತಿಪರ ಮಾರ್ಗದರ್ಶನ ಅಗತ್ಯವಾಗಿದೆ. ಅಲೈಡ್ ಹೆಲ್ತ್ ಸೈನ್ಸ್ ಕ್ಷೇತ್ರದಲ್ಲಿ ನಿರಂತರವಾಗಿ ಜ್ಞಾನವನ್ನು ವೃದ್ಧಿಸಿಕೊಳ್ಳುವ ಅಗತ್ಯ, ಪ್ರಾಯೋಗಿಕ ಕೌಶಲ್ಯಗಳ ಮಹತ್ವ, ಪ್ರಯೋಗಾಲಯ ಮತ್ತು ಆಸ್ಪತ್ರೆ ಆಧಾರಿತ ಸೇವೆಗಳಲ್ಲಿ ನಿಖರತೆ, ವೃತ್ತಿಪರ ನೈತಿಕತೆ ಹಾಗೂ ಆರೋಗ್ಯ ಸೇವೆಯಲ್ಲಿ ತಂಡದ ಸಹಕಾರದ ಮಹತ್ವದ ಎಂದು ಬೆಂಗಳೂರಿನ ಕಿಮ್ಸ್ ಅಲೈಡ್ ಹೆಲ್ತ್ ಸೈನ್ಸ್ ಕಾಲೇಜಿನ ಪೆಥಾಲಜಿ ವಿಭಾಗದ ಪ್ರಾಧ್ಯಾಪಕರಾದ ಪ್ರೊ.ರಾಹುಲ್ ರವರು ತಿಳಿಸಿದರು.

ನಗರದ ಶೆಟ್ಟಿಹಳ್ಳಿ ಹೊರವಲಯದ ಜಯನಗರ ದಕ್ಷಿಣದಲ್ಲಿರುವ ವರದರಾಜ ಚಾರಿಟಬಲ್ ಟ್ರಸ್ಟ್‌ನ ವತಿಯಿಂದ ವರದರಾಜ ಪ್ಯಾರಾಮೆಡಿಕಲ್ ಮತ್ತು ಬಿ.ಎಸ್. ಅಲೈಡ್ ಹೆಲ್ತ್ ಸೈನ್ಸ್ ಕಾಲೇಜಿನ ವತಿಯಿಂದ "ಒಂಬತ್ತು ದಿನಗಳ ಸಮಗ್ರ ಇಂಡಕ್ಷನ್ ಕಾರ್ಯಕ್ರಮವು ಸಮಾರೋಪ" ಸಮಾರಂಭವನ್ನು ಅ.3 ರಂದು ಶನಿವಾರ ಬೆಳಗ್ಗೆ 11 ಗಂಟೆಗೆ ಕಾಲೇಜಿನ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮವನ್ನು ಉದ್ಘಾಟಿಸಿ, ಪ್ರೊ.ರಾಹುಲ್‌ರವರು ಮಾತನಾಡುತ್ತಾ ಆರೋಗ್ಯ ಕ್ಷೇತ್ರದಲ್ಲಿ ಅಲೈಡ್ ಹೆಲ್ತ್ ಸೈನ್ಸ್ ವೃತ್ತಿಪರರ ಪಾತ್ರ ದಿನದಿಂದ ದಿನಕ್ಕೆ ಮಹತ್ವ ಪಡೆಯುತ್ತಿರುವ ಹಿನ್ನೆಲೆಯಲ್ಲಿ, ವಿದ್ಯಾರ್ಥಿಗಳು ತಮ್ಮ ಪದವಿ ಶಿಕ್ಷಣದ ಆರಂಭದಲ್ಲಿಯೇ ಈ ಕ್ಷೇತ್ರದ ಸ್ವರೂಪ, ವೃತ್ತಿಪರ ಜವಾಬ್ದಾರಿಗಳು, ಆರೋಗ್ಯ ಸೇವಾ ವ್ಯವಸ್ಥೆ, ತ್ರೈಕ್ಷಣಿಕ ಅವಕಾಶಗಳು ಹಾಗೂ ಭವಿಷ್ಯದ ವೃತ್ತಿ ಮಾರ್ಗಗಳ ಕುರಿತು ಸಮಗ್ರ ಅರಿವು ಹೊಂದುವುದು ಅಗತ್ಯವಾಗಿದೆ. ವಿವಿಧ ವೃತ್ತಿಪರ ವಿಭಾಗಗಳ

ಕಾರ್ಯವೈಖರಿ, ಆಸ್ಪತ್ರೆ ಆಧಾರಿತ ಆರೋಗ್ಯ ಸೇವೆ, ತಂಡದ ಸಹಕಾರ, ವೃತ್ತಿಪರ ನೈತಿಕತೆ, ಸಂವಹನ ಕೌಶಲ್ಯ ಶಿಸ್ತು ಹಾಗೂ ರೋಗಿಗಳೊಂದಿಗೆ ವೃತ್ತಿಪರವಾಗಿ ನಡೆದುಕೊಳ್ಳುವ ವಿಧಾನಗಳಿಂದಿರುವ ವಿವಿಧ ವಿಷಯಗಳ ಕುರಿತು ಮಾರ್ಗದರ್ಶನ ನೀಡಲಾಯಿತು.

ಕಾರ್ಯಕ್ರಮದಲ್ಲಿ ವರದರಾಜ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ವರುಣ್ ಅಶ್ವಿನ್ಕುಮಾರ್‌ರವರು ಮಾತನಾಡುತ್ತಾ ಶಿಕ್ಷಣದ ಉದ್ದೇಶ ಕೇವಲ ಪರೀಕ್ಷೆಗಳಲ್ಲಿ ಉತ್ತಮ ಅಂಕಗಳನ್ನು ಗಳಿಸುವುದಲ್ಲ, ಗಳಿಸಿದ ಜ್ಞಾನವನ್ನು ಸಮಾಜದ ಒಳಿತಿಗಾಗಿ ಬಳಸುವ ಜವಾಬ್ದಾರಿಯುತ ವೃತ್ತಿಪರರನ್ನು ರೂಪಿಸುವುದಾಗಿದೆ. "ರಾಷ್ಟ್ರೀಯ ಸಾಹಯಕ ಮತ್ತು ಆರೋಗ್ಯ ಸೇವಾ ವೃತ್ತಿಗಳ ಆಯೋಗ" (ಎನ್.ಸಿ.ಎಚ್ಎಪಿ) ವಿದ್ಯಾರ್ಥಿಗಳಿಗೆ ವಿಶೇಷ ಅರಿವು ಮೂಡಿಸಲಾಯಿತು. ವಿದ್ಯಾರ್ಥಿಗಳು ತಮ್ಮ ಶಿಕ್ಷಣದ ಅವಧಿಯಲ್ಲಿ ಶಿಸ್ತು, ಸಮಯಪಾಲನೆ, ನಿರಂತರ ಕಲಿಕೆ ಮತ್ತು ಉತ್ತಮ ವೃತ್ತಿಪರ ನಡವಳಿಕೆಯನ್ನು ರೂಢಿಸಿಕೊಳ್ಳಬೇಕು. ಆರೋಗ್ಯ ಕ್ಷೇತ್ರದಲ್ಲಿ ಸೇವೆ ಸಲ್ಲಿಸುವ ಪ್ರತಿಯೊಬ್ಬ ವೃತ್ತಿಪರನ ಮೇಲೂ ಸಮಾಜವು ಹೆಚ್ಚಿನ ನಂಬಿಕೆ ಇಟ್ಟಿರುವುದರಿಂದ, ಮಾನವೀಯ ಮೌಲ್ಯಗಳೊಂದಿಗೆ ತಮ್ಮ ವೃತ್ತಿಜೀವನವನ್ನು ರೂಪಿಸಿಕೊಳ್ಳಬೇಕು ಎಂದರು.

ಇದೇ ಸಂದರ್ಭದಲ್ಲಿ ವರದರಾಜ ಶಿಕ್ಷಣ ಸಂಸ್ಥೆಯ ನಿರ್ದೇಶಕರಾದ ಡಾ.ಮುಬಾರಕ್‌ರವರು ಮಾತನಾಡುತ್ತಾ ಅಲೈಡ್ ಹೆಲ್ತ್ ಸೈನ್ಸ್ ಕ್ಷೇತ್ರವು ಆರೋಗ್ಯ ಸೇವಾ ವ್ಯವಸ್ಥೆಯ ಪ್ರಮುಖ ಅಂಗವಾಗಿದ್ದು, ವಿದ್ಯಾರ್ಥಿಗಳು ತಮ್ಮ ಶಿಕ್ಷಣವನ್ನು ಗಂಭೀರವಾಗಿ ಪರಿಗಣಿಸಿ ಪ್ರಾಯೋಗಿಕ ಹಾಗೂ ವೃತ್ತಿಪರ ಕೌಶಲ್ಯಗಳನ್ನು ಬೆಳೆಸಿಕೊಳ್ಳಬೇಕು. ವಿದ್ಯಾರ್ಥಿಗಳು ಹೊಸ ತಂತ್ರಜ್ಞಾನಗಳು ಮತ್ತು ಆರೋಗ್ಯ ಕ್ಷೇತ್ರದಲ್ಲಿನ ಬದಲಾವಣೆಗಳಿಗೆ ಹೊಂದಿಕೊಳ್ಳುವ ಮನೋಭಾವವನ್ನು ಬೆಳೆಸಿಕೊಳ್ಳಬೇಕು. ಪದವಿ ಶಿಕ್ಷಣದ ಅವಧಿಯಲ್ಲಿ ಕಲಿಕೆಯ ಜೊತೆಗೆ ಸಂಶೋಧನೆ, ಪ್ರಾಯೋಗಿಕ ತರಬೇತಿ ಮತ್ತು ವೃತ್ತಿಪರ ಬೆಳವಣಿಗೆಗೆ ಆದ್ಯತೆ ನೀಡಬೇಕು ಎಂದು ಅವರು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ವರದರಾಜ ಪ್ಯಾರಾಮೆಡಿಕಲ್ ಮತ್ತು ಅಲೈಡ್ ಹೆಲ್ತ್ ಸೈನ್ಸ್ ಕಾಲೇಜಿನ ಪ್ರಾಂಶುಪಾಲರಾದ ಪ್ರೊ.ಮೊಹಬೂಬ್ ಅಲೀರವರು ಮಾತನಾಡುತ್ತಾ ನೂತನ ವಿದ್ಯಾರ್ಥಿಗಳು ಸಂಸ್ಥೆಯ ಶೈಕ್ಷಣಿಕ ವಾತಾವರಣ, ಅಲೈಡ್ ಹೆಲ್ತ್ ಸೈನ್ಸಸ್‌ನ ವೃತ್ತಿಪರರ ವ್ಯಾಪ್ತಿ ಮತ್ತು ತಮ್ಮ ಮುಂದಿರುವ ಅವಕಾಶಗಳನ್ನು ಆರಂಭದಲ್ಲಿಯೇ ಅರ್ಥಮಾಡಿಕೊಳ್ಳುವುದು ಇಂಡಕ್ಷನ್ ಕಾರ್ಯಕ್ರಮದ ಪ್ರಮುಖ ಉದ್ದೇಶವಾಗಿದೆ ಎಂದರು. ವರದರಾಜ ಸಂಸ್ಥೆಯ ಬೋಧಕ-ಬೋಧಕೇತರ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿ-ವಿದ್ಯಾರ್ಥಿನಿಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಫೋಟೋ ಕ್ಯಾಪ್ಷನ್:

ನಗರದ ಶೆಟ್ಟಿಹಳ್ಳಿ ಹೊರವಲಯದ ಜಯನಗರ ದಕ್ಷಿಣದಲ್ಲಿರುವ ವರದರಾಜ ಚಾರಿಟಬಲ್ ಟ್ರಸ್ಟ್‌ನ ವತಿಯಿಂದ ವರದರಾಜ ಪ್ಯಾರಾಮೆಡಿಕಲ್ ಮತ್ತು ಬಿ.ಎಸ್. ಅಲೈಡ್ ಹೆಲ್ತ್ ಸೈನ್ಸ್ ಕಾಲೇಜಿನ ವತಿಯಿಂದ "ಒಂಬತ್ತು ದಿನಗಳ ಸಮಗ್ರ ಇಂಡಕ್ಷನ್ ಕಾರ್ಯಕ್ರಮವು ಸಮಾರೋಪ" ಸಮಾರಂಭವನ್ನು ಅ.3 ರಂದು ಶನಿವಾರ ಬೆಳಗ್ಗೆ 11 ಗಂಟೆಗೆ ಕಾಲೇಜಿನ ಆವರಣದಲ್ಲಿ ಹಮ್ಮಿಕೊಳ್ಳಲಾಗಿತ್ತು. ಚಿತ್ರದಲ್ಲಿ ಕಿಮ್ಸ್ ಅಲೈಡ್ ಹೆಲ್ತ್ ಸೈನ್ಸ್ ಕಾಲೇಜಿನ ಹೊಬಾಲ ವಿಭಾಗದ ಪ್ರಾಧ್ಯಾಪಕರಾದ ಪ್ರೊ. ರಾಹುಲ್, ವರದರಾಜ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿ ವರುಣ್ ಅಶ್ವಿನ್, ವರದರಾಜ ಶಿಕ್ಷಣ ಸಂಸ್ಥೆಯ ನಿರ್ದೇಶಕರಾದ ಡಾ.ಮುಬಾರಕ್, ವರದರಾಜ ಪ್ಯಾರಾಮೆಡಿಕಲ್ ಮತ್ತು ಅಲೈಡ್ ಹೆಲ್ತ್ ಸೈನ್ಸ್ ಕಾಲೇಜಿನ ಪ್ರಾಂಶುಪಾಲರಾದ ಪ್ರೊ. ಮೊಹಬೂಬ್ ಅಲೀ, ಹಾಗೂ ವರದರಾಜ ಸಂಸ್ಥೆಯ ಬೋಧಕ-ಬೋಧಕೇತರ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿ-ವಿದ್ಯಾರ್ಥಿನಿಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

ಕರಾಟೆಯಲ್ಲಿ ರಾಮನಗರ ವಿದ್ಯಾರ್ಥಿನಿಗೆ ಚಿನ್ನದ ಪದಕ

ರಾಮನಗರ: ಮುಂಬೈನಲ್ಲಿ ನಡೆದ ಅಂತಾರಾಷ್ಟ್ರೀಯ ಮಟ್ಟದ ಕರಾಟೆ ಪಂದ್ಯಾವಳಿಯಲ್ಲಿ ರಾಮನಗರದ ವಿದ್ಯಾರ್ಥಿನಿ ರಿಷಿಕಾ ಚಿನ್ನದ ಪದಕ ಗೆದ್ದು ಜಿಲ್ಲೆಗೆ ಕೀರ್ತಿ ತಂದಿದ್ದಾರೆ. ನಗರದ ಅಗ್ರಾಜ ಬಡಾವಣೆಯ ಶ್ರೀದರ್ಶಿಕಲ್ಚರ್ ಸಂಸ್ಥೆಯ ವಿದ್ಯಾರ್ಥಿನಿ ಪುತ್ರಿ ರಿಷಿಕಾ (14) ಚಿನ್ನದ ಪದಕ ಗೆದ್ದು ಸಾಧನೆ. ನಗರದ ಯುನಿವರ್ಸಲ್ ಶಾಲೆಯಲ್ಲಿ 9ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ರಿಷಿಕಾ, ಬಾಲ್ಯದಿಂದಲೇ ಕರಾಟೆಯಲ್ಲಿ ಆಸಕ್ತಿ ಬೆಳೆಸಿಕೊಂಡು ತರಬೇತಿ ಪಡೆಯುತ್ತಿದ್ದಾರೆ. ಕರಾಟೆ ತರಬೇತುದಾರ ಮಹೇಶ್ ಅವರ ಮಾರ್ಗದರ್ಶನದಲ್ಲಿ ಸತತ ಅಭ್ಯಾಸ ನಡೆಸುತ್ತಿರುವ ರಿಷಿಕಾ, ಮುಂಬೈನಲ್ಲಿ ನಡೆದ ಅಂತಾರಾಷ್ಟ್ರೀಯ ಕರಾಟೆ ಸಂದ್ಯಾವಳಿಯಲ್ಲಿ ಅತ್ಯತ್ತಮ ಪ್ರದರ್ಶನ ನೀಡಿ ಚಿನ್ನದ ಪದಕ ತಮ್ಮದಾಗಿಸಿಕೊಂಡಿದ್ದಾರೆ. ಈ ಸಾಧನೆಯ ಬೆನ್ನಲ್ಲೆ ಜೇಜಾಶಾದಲ್ಲಿ ನಡೆಯಲಿರುವ ಎಷ್ಟರ್ ಕರಾಟೆ ಫೆಡರೇಷನ್ ಆಯೋಜಿಸುವ ಅಂತಾರಾಷ್ಟ್ರೀಯ ಸಂದ್ಯಾವಳಿಗೆ ರಿಷಿಕಾ ಆಯ್ಕೆಯಾಗಿದ್ದಾರೆ. ಮುಂದಿನ ಸ್ಪರ್ಧೆಯಲ್ಲೂ ಉತ್ತಮ ಪ್ರದರ್ಶನ ನೀಡಿ ದೇಶಕ್ಕೆ ಕೀರ್ತಿ ತರುವ ವಿಶ್ವಾಸವನ್ನು ಕುಟುಂಬಸ್ಥರು ಹಾಗೂ ತರಬೇತುದಾರರು ವ್ಯಕ್ತಪಡಿಸಿದ್ದಾರೆ.

ಟೇಕ್ವೊಂಡೋ ಸ್ಪರ್ಧೆಯಲ್ಲಿ ಪೂರ್ವಿಕಗೆ ಚಿನ್ನದ ಪದಕ

ರಾಮನಗರ: ಶರತ್ ಮೆಮೋರಿಯಲ್ ಶಾಲೆಯ ವಿದ್ಯಾರ್ಥಿನಿ ಪೂರ್ವಿಕ.ಎಸ್ ಹುಬ್ಬಾಳ್ ನ ಅಮೃತಸರದಲ್ಲಿ ನಡೆದ ಸಿ ಐ ಎಸ್ ಸಿ ಇಂಟ್ರಾಜನಲ್ ಟೇಕ್ವೊಂಡೋ ಸ್ಪರ್ಧೆಯಲ್ಲಿ ಚಿನ್ನದ ಪದಕ ಹಡೆದು ಶಾಲೆಯ ಕೀರ್ತಿ ಹೆಚ್ಚಿಸಿದ್ದಾರೆ ಎಂದು ಶಾಲೆಯ ಪ್ರಕಟಣೆ ತಿಳಿಸಿದೆ.

ನಗರದ ಮಾಗಡಿ ರಸ್ತೆಯಲ್ಲಿನ ಕೆಂಪೇಗೌಡ ಸರ್ಕಲ್ ಬಳಿಯ ಶರತ್ ಮೆಮೋರಿಯಲ್ ಶಾಲೆಯ 10ನೇ ತರಗತಿಯಲ್ಲಿ ಪೂರ್ವಿಕ.ಎಸ್ ವ್ಯಾಸಂಗ ಮಾಡುತ್ತಿದ್ದಾರೆ. ರಾಷ್ಟ್ರೀಯ ಮಟ್ಟದಲ್ಲಿ ಚಿನ್ನದ ಪದಕ ಹಡೆದು ಸಾಧನೆ ಮಾಡಿದ ವಿದ್ಯಾರ್ಥಿನಿಗೆ ಶರತ್ ಮೆಮೋರಿಯಲ್ ಶಾಲೆಯ ಸಂಸ್ಥಾಪಕ ಅಧ್ಯಕ್ಷ ಆದಿನಾರಯಣ ರೆಡ್ಡಿ, ಕಾರ್ಯದರ್ಶಿ ರಾಜೇಶ್ವರಿ ಎಸ್., ಪ್ರಾಂಶುಪಾಲರಾದ ರೂಪಾದೇವಿ ಕೆ.ಎಸ್., ಹಾಗೂ ಶಿಕ್ಷಕರು ಅಭಿನಂದನೆ ಸಲ್ಲಿಸಿದ್ದಾರೆ.

ಶಿಕ್ಷಕರು ಶಿಕ್ಷಣಕ್ಕೆ ಒತ್ತು ಕೊಟ್ಟು ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಶ್ರಮಿಸಿದ್ದಾರೆ.

ರಾಮನಗರ : ನಗರದ ಕ್ಷೇತ್ರ ಶಿಕ್ಷಣಾಧಿಕಾರಿ ಕಛೇರಿ ಆವರಣದಲ್ಲಿ ಸೋಮವಾರ ಕ್ಷೇತ್ರ ಸಮನ್ವಯಾಧಿಕಾರಿ ಮತ್ತು ಶಿಕ್ಷಣ ಸಂಯೋಜಕರು, ಸಮೂಹ ಸಂಪನ್ಮೂಲ ವ್ಯಕ್ತಿಗಳಿಗೆ ಐದು ವರ್ಷಗಳ ಕಾಲ ತಾಲ್ಲೂಕಿನ ವಿವಿಧ ವೃತ್ತಗಳಲ್ಲಿ ಕರ್ತವ್ಯ ನಿರ್ವಹಿಸಿ ಮತ್ತೆ ಶಾಲೆಗಳಿಗೆ ವರ್ಗಾವಣೆಗೊಂಡ ಶಿಕ್ಷಕರಿಗೆ ಕ್ಷೇತ್ರ ಶಿಕ್ಷಣಾಧಿಕಾರಿ ಕ್ಷೇತ್ರ ಸಮನ್ವಯಾಧಿಕಾರಿ ಕಛೇರಿಯಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಕ್ಷೇತ್ರ ಶಿಕ್ಷಣಾಧಿಕಾರಿ ಸೋಮಲಿಂಗಯ್ಯ ಮಾತನಾಡಿ ರಾಮನಗರ ತಾಲ್ಲೂಕಿನ ವಿವಿಧ ವೃತ್ತಗಳಲ್ಲಿ ಹಲವು ಶಿಕ್ಷಕರುಗಳು ಶಿಕ್ಷಣ ಇಲಾಖೆ ಆದೇಶದಂತೆ ಕಳೆದ ಐದು ವರ್ಷಗಳ ಹಿಂದೆ ಕ್ಷೇತ್ರ ಸಮನ್ವಯಾಧಿಕಾರಿ ಮತ್ತು ಶಿಕ್ಷಣ ಸಂಯೋಜಕರು, ಸಮೂಹ ಸಂಪನ್ಮೂಲ ವ್ಯಕ್ತಿಗಳಾಗಿ ಕರ್ತವ್ಯ ನಿರ್ವಹಿಸುತ್ತಿದ್ದರು. ಈಗ ಅವರ ಸೇವಾ ಅವಧಿ ಪೂರ್ಣಗೊಂಡಿದ್ದು ಮತ್ತೆ ಶಿಕ್ಷಕರಾಗಿ ಕರ್ತವ್ಯಕ್ಕೆ ಹಾಜರಾಗಿದ್ದರೋ ಈಗ ಮತ್ತೆ ಬೇರೆ ಬೇರೆ ಶಾಲೆಗಳಿಗೆ ಶಿಕ್ಷಕರಾಗಿ ಕರ್ತವ್ಯ ನಿರ್ವಹಿಸಲಿದ್ದಾರೆ.

ಶಿಕ್ಷಕ ವೃತ್ತಿ ಪವಿತ್ರವಾದ ವೃತ್ತಿಯಾಗಿದ್ದು ಬೇರೆ ವೃತ್ತಿಗಿಂತಲೂ ಶಿಕ್ಷಕ ವೃತ್ತಿಗೆ ಹೆಚ್ಚಿನ ಗೌರವ ವೃತ್ತಿಯಲ್ಲಿ ಸಿಗಿದೆ. ತಾಲ್ಲೂಕಿನ ವೃತ್ತಗಳಲ್ಲಿ ಅವರಿಗೆ ಶಿಕ್ಷಣ ಇಲಾಖೆ ಮೆಚ್ಚಿದ ಕರ್ತವ್ಯವನ್ನು ಅಚ್ಚುಕಟ್ಟಾಗಿ ನಿರ್ವಹಿಸಿ ಶಿಕ್ಷಣಕ್ಕೆ ಒತ್ತು ಕೊಟ್ಟು ವಿದ್ಯಾರ್ಥಿಗಳ ಭವಿಷ್ಯ ರೂಪಿಸುವಲ್ಲಿ ಶ್ರಮಿಸಿದ್ದಾರೆ. ಅವರ ಸೇವಾ ಅವಧಿಯಲ್ಲಿ ಶಿಕ್ಷಣ ಇಲಾಖೆಗೆ ಯಾವುದೇ ನ್ಯೂನತೆ ಬರದಂತೆ ಎಚ್ಚರಿಕೆ ವಹಿಸಿ ಶಿಕ್ಷಣ ಇಲಾಖೆಗೆ ಒಳ್ಳೆಯ ಹೆಸರು ತಂದಿದ್ದಾರೆ ಈ ಹಿನ್ನೆಲೆಯಲ್ಲಿ ಅವರನ್ನು ಶಿಕ್ಷಕ ಸಹ ಬೃಂದದ ನೇತೃತ್ವದಲ್ಲಿ ಸನ್ಮಾನಿಸಿ ಗೌರವಿಸಲಾಗಿದೆ ಎಂದರು.

ಕ್ಷೇತ್ರ ಸಂಪನ್ಮೂಲವ್ಯಕ್ತಿ ಗೌರೀಶ್ ಮಾತನಾಡಿ ನಮ್ಮ ಕರ್ತವ್ಯದ ಸಮಯದಲ್ಲಿ ಶಿಕ್ಷಣ ಇಲಾಖೆಯ ಹಿರಿಯ ಅಧಿಕಾರಿಗಳು ಮಾರ್ಗದರ್ಶನ ನೀಡಿದ್ದಾರೆ. ವೃತ್ತಗಳಲ್ಲಿನ ಶಿಕ್ಷಕ ವೃಂದ ಉತ್ತಮವಾಗಿ ಸ್ಪಂಧನೆ ನೀಡಿ ಕರ್ತವ್ಯದ ಸಮಯದಲ್ಲಿ ಉತ್ತಮ ಸಹಕಾರ ನೀಡಿದ್ದಾರೆ ಎಂದರು. ಕ್ಷೇತ್ರ ಸಮನ್ವಯಾಧಿಕಾರಿ, ಶಿಕ್ಷಣ ಸಂಯೋಜಕರಾದ ಸಿದ್ದರಂಗಸ್ವಾಮಿ, ರೇಣ್ಣಾ ಗೋಕರ್ಣ, ಲಕ್ಷಿ DDೀದೇವಿ, ಸಾಯಿಕೃಷ್ಣ, ಜೆ.ಸಿ. ಸುರೇಶ್, ಸಮೂಹ ಸಂಪನ್ಮೂಲ ವ್ಯಕ್ತಿಗಳಾದ ಗೌರೀಶ್, ಎಂ. ರಮೇಶ್, ವಿ. ರಮೇಶ್, ಮಂಜಪ್ಪ, ಸಿದ್ದರಾಜು, ರಂಗಸ್ವಾಮಿ, ರಾಮಕೃಷ್ಣಯ್ಯ ಸಾಗಾಲ್ಲರು, ಶ್ಯಾಮರಾವ್, ಮೈತ್ರುಂದಲು, ಶಿವಣ್ಣ ಇವರುಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಬೆಂಗಳೂರು ಜಿಲ್ಲಾಧ್ಯಕ್ಷ ಹೆಚ್. ಹನುಮಯ್ಯ ತಾಲ್ಲೂಕು ಅಧ್ಯಕ್ಷ ಎಲ್.ಜೆ. ಬಸವಗೌಡ, ಸತೀಶ್‌ಕುಮಾರ್, ಮಂಜುನಾಥ್, ಮುನಿಯಪ್ಪ, ಬೆಲರ್‌ಬಿ ಮಧುಮತಿ, ಇಒ.ಬಿ ರಾಜಣ್ಣ ನಂಜಾಂಡಪ್ಪ ಪ್ರಮೀಳಾ ಇದ್ದರು.

ಅಭಿವೃದ್ಧಿ ಕಾಣದ ಚಿಕ್ಕಲ್ಲೂರು ತೆಳ್ಳನೂರು ಮಾರ್ಗ ರಸ್ತೆ

ಕೊಳ್ಳೇಗಾಲ ತಾಲ್ಲೂಕಿನ ಚಿಕ್ಕಲ್ಲೂರು ಹವಾಡ ಪುರುಷ ಸಿದ್ದಪ್ಪಾಜಿ ನೆಲೆಸಿರುವ ಪುಣ್ಯ ಕ್ಷೇತ್ರವೆಲ್ಲೆಂದಲ್ಲಿರುವ ಒಂದು ಪವಿತ್ರ ಪುಣ್ಯ ಕ್ಷೇತ್ರವಾಗಿದ್ದು ದಿನನಿತ್ಯ ನೂರಾರು ಭಕ್ತರು ಶ್ರೀ ಮಠಕ್ಕೆ ಭೇಟಿ ನೀಡುತ್ತಾರೆ. ಚಿಕ್ಕಲ್ಲೂರು ಕ್ಷೇತ್ರ ಕೊಳ್ಳೇಗಾಲ ತಾಲ್ಲೂಕಿನ ತೆಳ್ಳನೂರು ಹುಣಾಯಿತಿ ವ್ಯಾಪ್ತಿಗೆ ಸೇರಿದ್ದು, ಹನೂರು ವಿಧಾನಸಭಾ ಕ್ಷೇತ್ರಕ್ಕೆ ಒಳಪಟ್ಟಿದೆ, ರಾಜ್ಯದ ವಿವಿಧ ಜಿಲ್ಲೆಗಳಿಂದ ಹಾಗೂ ಹೊರ ರಾಜ್ಯಗಳಿಂದ ಚಿಕ್ಕಲ್ಲೂರು ಕ್ಷೇತ್ರಕ್ಕೆ ಬರಲು ಎರಡು ಮಾರ್ಗಗಳಿವೆ ಒಂದು ಕೊಳ್ಳೇಗಾಲ ದೊಡ್ಡಿಂದುವಾಡಿ ಹಾಗೂ ಹಾಳ್ಯ ಮಾರ್ಗ, ಇನ್ನೊಂದು ಹನೂರು ಬಂಡಳ್ಳಿ, ತೆಳ್ಳನೂರು ಮಾರ್ಗ, ಎರಡು ಮಾರ್ಗಗಳಲ್ಲಿ ಸ್ವಂತ್ರಯುದಿಂದ ಅಲ್ಲದೆ ಹೊರ ರಾಜ್ಯಗಳಿಂದಲೂ ಕೂಡ ಸಾವಿರಾರು ಭಕ್ತರು ಸಿದ್ದಪ್ಪಾಜಿ ಕ್ಷೇತ್ರಚಿಕ್ಕಲ್ಲೂರಿಗೆ ಬರುತ್ತಾರೆ. ಆದರೆ ಬರುವ ಭಕ್ತರಿಗೆ ಸುಸಜ್ಜಿತವಾದ ಉತ್ತಮ ರಸ್ತೆ ಇಲ್ಲದೆ ಕಲ್ಲು ಮಣ್ಣು ಹಳ್ಳಗುಂಡಿಗಳ ರಸ್ತೆಯಲ್ಲಿ ಪ್ರಾಣ ಸಾವಾರು ಜೀವ ಕೈಯಲ್ಲಿಡಿದುಕೊಂಡು ಬಿದ್ದು ಕೆಡೆದು ಸಂಚರಿಸುವ ದುಸ್ಥಿತಿ ಈ ಮಾರ್ಗದ ರಸ್ತೆಯಲ್ಲಿ ನಿರ್ಮಾಣವಾಗಿದೆ, ದೊಡ್ಡ ಹಳ್ಳಗುಂಡಿಗಳನ್ನೋಡಿದರೆ ಮರಣಕ್ಕೆ ಬಾಯಿ ತೆರೆದು ನಿಂತ ಯಮನ ಸ್ವರೂಪಿಯಂತೆತೆ, ಕೊಳ್ಳೇಗಾಲದಿಂದ ದೊಡ್ಡಂದುವಾಡಿ ಮಾರ್ಗ ಚಿಕ್ಕಲ್ಲೂರಿಗೆ ಬರುವ ರಸ್ತೆ ಈಗಾಗಲೇ ರಸ್ತೆ ಕಾಮಗಾರಿ ಪ್ರಾರಂಭವಾಗಿ ಸುಮಾರು ವರ್ಷಗಳ ಕಳೆದರು ಇನ್ನು ಕೂಡ ಕಾಮಗಾರಿ ಅಮೇಗತಿಯಲ್ಲಿ ಸಾಗುತ್ತಿದೆ, ಆದರೆ ಹನೂರು ಬಂಡಳ್ಳಿ ತೆಳ್ಳನೂರು ಮಾರ್ಗ ಚಿಕ್ಕಲ್ಲೂರಿಗೆ ಬರುವ ರಸ್ತೆ ಹನೂರಿನಿಂದ ಬಂಡಳ್ಳಿವರೆಗೆ ಕಾಮಗಾರಿ ನಡೆಯುತ್ತಿದೆ, ಆದರೆ ತೆಳ್ಳನೂರಿಂದ ಚಿಕ್ಕಲ್ಲೂರುವರೆಗೆ ರಸ್ತೆ ತೀರ ಹದಗೆಟ್ಟಿದೆ ಪ್ರತಿ ವರ್ಷ ಮಳೆ ಬಿದ್ದಾಗ ಹಳ್ಳಗಳು ತುಂಬಿ ಹರಿದು ರಸ್ತೆ ಪೂರ್ತಾ ಹಾಳಾಗಿದೆ, ದ್ವಿಚಕ್ರವಾಹನಗಳು ಇರಲಿ ದೊಡ್ಡ ದೊಡ್ಡ ವಾಹನಗಳು ಈ ರಸ್ತೆಯಲ್ಲಿ ಸಂಚರಿಸಲು ಹರಿಸಾಹಸ ಪಡುತ್ತಿದ್ದಾರೆ, ಪ್ರಯ್ಯ ಕ್ಷೇತ್ರ ದರ್ಶನಕ್ಕೆಂದು ಈ ಮಾರ್ಗದಲ್ಲಿ ಸಂಚರಿಸುವ ಪ್ರಯಾಣಿಕರು ಹದಗೆಟ್ಟ ರಸ್ತೆಯನ್ನು ಕಂಡು ಸಂಬಂಧಪಟ್ಟ ಅಧಿಕಾರಿಗಳಿಗೆ ಹಾಗೂ ಶಾಸಕರಿಗೆ ಇಡೀ ಶಾಪ ಹಾಕುತ್ತಿದ್ದಾರೆ, ಯೋಚೋಚಪಡೋಣಿ ಇಲಾಖೆಯಿಂದ ಹಿಂದೆ ಇದ್ದ ಪುರುಷೋತ್ತಮ್ ಹಾಗೂ ಇಂಜಿನಿಯರ್ ಸುರೇಂದ್ರರವರುಗಳಾಗ ಚಿಕ್ಕಲ್ಲೂರು ತೆಳ್ಳನೂರು ಮಾರ್ಗ ರಸ್ತೆ ಕಾಮಗಾರಿ ಪ್ರಾರಂಭದ ಬಗ್ಗೆ ಗ್ರಾಮದವರು ಮನವಿ ಮಾಡಿದ್ದರು, ಈಗ ಯೋಚೋಚ

ಹುಳಿಯಾರು ಪಟ್ಟಣದ ಸಮಸ್ಯೆಗಳ ಪರಿಹಾರಕ್ಕೆ ಆಡಳಿತಾಧಿಕಾರಿ ಮಮತಾ ಕಡಕ್ ಸೂಚನೆ

ಸೂರ್ಯಪ್ರಗತಿನ್ಯೂಸ್.ಕಾಂ

ಹುಳಿಯಾರು: ಹುಳಿಯಾರು ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಹಲವು ದಿನಗಳಿಂದ ಸಾರ್ವಜನಿಕರಿಗೆ ತೊಂದರೆಯಾಂಟು ಮಾಡುತ್ತಿರುವ ಸಮಸ್ಯೆಗಳ ಪರಿಹಾರಕ್ಕಾಗಿ ಪಟ್ಟಣ ಪಂಚಾಯಿತಿ ಆಡಳಿತಾಧಿಕಾರಿಯಾದ ಮಮತಾ ತಹಸೀಲ್ದಾರ್ ಮಮತಾ ಅವರು ಕಡಕ್ ಕ್ರಮಗಳಿಗೆ ಮುಂದಾಗಿದ್ದಾರೆ. ಹುಳಿಯಾರು ಪಟ್ಟಣ ಪಂಚಾಯಿತಿ ಸಭಾಂಗಣದಲ್ಲಿ ಮುಖ್ಯಾಧಿಕಾರಿ ಮಂಜುನಾಥ್, ಪಿಎಸ್ಐ ರೇಣುಕಾ ಯಾದವ್, ಪರಿಸರ ಇಂಜಿನಿಯರ್ ಚಂದ್ರಶೇಖರ್ ಸೇರಿದಂತೆ ಆಟೋ ಚಾಲಕರು, ಫುಟ್ಪಾತ್ ವ್ಯಾಪಾರಿಗಳು ಹಾಗೂ ಗ್ಯಾಸ್ ಏಜೆನ್ಸಿ ವಿತರಕರೊಂದಿಗೆ ಸುದೀರ್ಘ ಸಭೆ ನಡೆಸಿ, ಪ್ರಮುಖ ಸಮಸ್ಯೆಗಳ ಕುರಿತು ಚರ್ಚಿಸಿ ಸೂಕ್ತ ಸೂಚನೆಗಳನ್ನು ನೀಡಿದರು.

ವಾಣಿಜ್ಯ ಉದ್ದೇಶಕ್ಕೆ ಗೃಹಬಳಕೆ ಗ್ಯಾಸ್ ಸಿಲಿಂಡರ್ ಬಳಕೆಗೆ ಎಚ್ಚರಿಕೆ :

ಪಟ್ಟಣಕ್ಕಾದ್ಯಂತ ಇರುವ ಹೋಟೆಲ್‌ಗಳು, ವೆಲ್ಡಿಂಗ್ ಶಾಪ್‌ಗಳು ಹಾಗೂ ಸರ್ವಿಸ್ ಸೆಂಟರ್‌ಗಳಲ್ಲಿ ವಾಣಿಜ್ಯ ಉದ್ದೇಶಕ್ಕಾಗಿ ಗೃಹಬಳಕೆಯ ಗ್ಯಾಸ್ ಸಿಲಿಂಡರ್‌ಗಳನ್ನು ಅಕ್ರಮವಾಗಿ ಬಳಸಲಾಗುತ್ತಿರುವುದು ಗಮನಕ್ಕೆ ಬಂದಿದೆ. ಮನೆಗೆ ಬಳಸುವ ಸಿಲಿಂಡರ್‌ಗಳನ್ನು ವಾಣಿಜ್ಯ ಚಟುವಟಿಕೆಗೆ ಬಳಸುವುದು ಹೆಚ್ಚಾಗಿದ್ದು, ಇದನ್ನು ತಡೆಗಟ್ಟಲು ಮೊದಲು ಸಾರ್ವಜನಿಕರಲ್ಲಿ ಮತ್ತು ವ್ಯಾಪಾರಿಗಳಲ್ಲಿ ಅರಿವು ಮೂಡಿಸುವಂತೆ ಗ್ಯಾಸ್ ಏಜೆನ್ಸಿಯವರಿಗೆ ಸೂಚಿಸಿದರು. ಹೋಟೆಲ್ ಹಾಗೂ ಸಣ್ಣಪಟ್ಟು ಅಂಗಡಿಗಳಿಗೆ ತೆರಳಿ ಪರಿಶೀಲಿಸಿ ನೋಟಿಸ್ ನೀಡಲು ಪಪಂ ಅಧಿಕಾರಿಗಳಿಗೆ ಸೂಚಿಸಿದರು. ಒಂದು ವಾರದ ಕಾಲಾವಕಾಶ ನೀಡಿದ ನಂತರವೂ ನಿಯಮ ಉಲ್ಲಂಘಿಸಿದರೆ ಅಂತಹ ಸಿಲಿಂಡರ್‌ಗಳನ್ನು ಸೀಜ್ ಮಾಡಿ, ಸೂಕ್ತ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ಗಂಭೀರ ಎಚ್ಚರಿಕೆ ನೀಡಿದರು ಕೆರೆ ಅಂಗಳದವ್ಯಾಪಾರಿಗಳಿಗೆ ಪರ್ಯಾಯ ವ್ಯವಸ್ಥೆ ಕೆರೆ ಅಂಗಳದ ಒತ್ತುವರಿ ಮತ್ತು ಸಮಸ್ಯೆಗಳ ಕುರಿತು ಉಪಲೋಕಾಯುಕ್ತರ ಸೂಚನೆಯಂತೆ ಈಗಾಗಲೇ ಲೋಕಾಯುಕ್ತ ಎಸ್ಪಿ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಈ ಭಾಗದಲ್ಲಿದ್ದ ವ್ಯಾಪಾರಿಗಳನ್ನು ತಕ್ಷಣವೇ ತೆರವುಗೊಳಿಸಿ, ಅವರ ಜೀವನೋಪಾಯಕ್ಕೆ ತೊಂದರೆ ಮಾಡುವ ಬದಲು, ಅಲ್ಲಿ ವ್ಯಾಪಾರ ಮಾಡುತ್ತಿರುವವರ ನಿಖರ ಪಟ್ಟಿ ತಯಾರಿಸುವಂತೆ ಪಟ್ಟಣ ಪಂಚಾಯಿತಿ ಮುಖ್ಯ ಅಧಿಕಾರಿ ಮಂಜುನಾಥ್ ಅವರಿಗೆ ಸೂಚನೆಯನ್ನು ನೀಡಿದರು. ಒಂದೇ ಕುಟುಂಬದವರು ಎರಡೂರು ಅಂಗಡಿಗಳನ್ನು ಇಟ್ಟುಕೊಳ್ಳುವುದನ್ನು ತಡೆದು, ನಿಜವಾದ ಅರ್ಹ ಬಡ ವ್ಯಾಪಾರಿಗಳನ್ನು ಗುರುತಿಸಿ, ಆಸ್ತ್ರೆಕಾಂಪೌಂಡ್ ಪಕ್ಕ ಅಥವಾ ಸೂಕ್ತ ಪರ್ಯಾಯ ಜಾಗದಲ್ಲಿ ವ್ಯಾಪಾರಕ್ಕೆ ಅವಕಾಶ ಕಲ್ಪಿಸಿಕೊಡುವ ಬಗ್ಗೆ ಅವರು ಚರ್ಚಿಸಿದರು.

ಪಾದಚಾರಿ ಮಾರ್ಗ ಒತ್ತುವರಿ ತೆರವು ಹಾಗೂ ಸುಗಮ ಸಂಚಾರ

: ಮಾ ಸ್ಟೋರ್‌ನಿಂದ ಶಿಲ್ಪಾ ಸ್ಟೋರ್‌ವರೆಗೆ ಹಾಗೂ ಶಿಲ್ಪಾ ಸ್ಟೋರ್‌ನಿಂದ ಸ್ಪಂದನ ನರ್ಸಿಂಗ್ ಹೋಮ್ ವರೆಗೆ ರಾಜ್‌ಕುಮಾರ್ ರಸ್ತೆಯಲ್ಲಿ ಅಂಗಡಿದಾರರು ಪಾದಚಾರಿ ಮಾರ್ಗಗಳನ್ನು (ಫುಟ್ಪಾತ್) ಅಕ್ರಮವಾಗಿ ಆಕ್ರಮಿಸಿಕೊಂಡಿರುವುದರಿಂದ ಸಾರ್ವಜನಿಕರ ಓಡಾಟಕ್ಕೆ ತೀವ್ರ ಅಡಚಣೆಯಾಗುತ್ತಿದೆ. ಸುಪ್ರೀಂ ಕೋರ್ಟ್ ಮತ್ತು ಹೈಕಾಡಳಿತ ಇಲಾಖೆಯ ನಿರ್ದೇಶನದಂತೆ ಸಾರ್ವಜನಿಕರು ಹಾಗೂ ಪಾದಚಾರಿಗಳ ಹಿತರಕ್ಷಣೆ ಮೊದಲ ಆದ್ಯತೆಯಾಗಿದ್ದು, ಫುಟ್ಪಾತ್ ಆಕ್ರಮಿಸಿಕೊಂಡಿರುವ ಅಂಗಡಿಯವರನ್ನು ತೆರವುಗೊಳಿಸಿ ಸುಗಮ ಸಂಚಾರಕ್ಕೆ ಅನುವು ಮಾಡಿಕೊಡುವಂತೆ ಹೊಲೀಸರು ಹಾಗೂ ಪಟ್ಟಣ ಪಂಚಾಯಿತಿ ಸಿಬ್ಬಂದಿಗೆ ಸೂಚಿಸಿದರು.

ಹೈವೇ ರಸ್ತೆಯಲ್ಲಿ ಅಸಮರ್ಪಕ ಪಾರ್ಕಿಂಗ್

ತಡೆಗೆ ಸೂಚನೆ:

ಎಪಿಎಂಸಿಯಿಂದ ಕನಕ ಸರ್ಕಲ್‌ವರೆಗೆ ರಾಷ್ಟ್ರೀಯ ಹೆದ್ದಾರಿ ಹಾದುಹೋಗಿದ್ದು, ರಸ್ತೆಯ ಇಕ್ಕೆಲಗಳಲ್ಲಿ ಸದಾಕಾಲ ಲಾರಿ ಮತ್ತು ಬಸ್‌ಗಳನ್ನು ಪಾರ್ಕಿಂಗ್ ಮಾಡುತ್ತಿರುವುದು ಗಮನಕ್ಕೆ ಬಂದಿದೆ. ಇದರಿಂದ ಸಾರ್ವಜನಿಕರಿಗೆ ಹಾಗೂ ಇತರೆ ವಾಹನ ಸವಾರರಿಗೆ ತೊಂದರೆಯಾಗುತ್ತಿದ್ದು, ಅಪಘಾತಗಳಿಗೆ ಕಾರಣವಾಗುತ್ತಿದೆ. ಈ ಭಾಗದಲ್ಲಿ ಅನಧಿಕೃತವಾಗಿ ವಾಹನ ನಿಲ್ಲಿಸುವುದನ್ನು ತಡೆಯಲು ಹೊಲೀಸ್ ಇಲಾಖೆಗೆ ಕಟ್ಟುನಿಟ್ಟಿನ ಕ್ರಮಕೈಗೊಳ್ಳುವಂತೆ ತಹಸೀಲ್ದಾರ್ ಮಮತಾ ಸೂಚಿಸಿದರು.

ರಾತ್ರಿ ಅಂಗಡಿ ಮುಗ್ಗಟ್ಟುಗಳ ಕಾರ್ಯಾಚರಣೆ ಸಮಯ ನಿಗದಿ

ಪಟ್ಟಣದಲ್ಲಿ ಸರಿರಾತ್ರಿಯವರೆಗೂ ಅಂಗಡಿ ಮುಗ್ಗಟ್ಟುಗಳು ತೆರೆದಿರುವುದರಿಂದ ಸಾಕಷ್ಟು ಸಮಸ್ಯೆಗಳು ಉಂಟಾಗುತ್ತಿವೆ ಎಂದು ಹಲವು ಸಾರ್ವಜನಿಕರು ದೂರು ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಬೇಕರಿ, ಹೋಟೆಲ್‌ಗಳು, ಬಾರ್‌ಗಳು ಹಾಗೂ ಔಷಧಿ ಅಂಗಡಿಗಳು ಸೇರಿದಂತೆ ವಿವಿಧ ರೀತಿಯ ಅಂಗಡಿಗಳ ಪ್ರತ್ಯೇಕ ಪಟ್ಟಿ ತಯಾರಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಪ್ರತಿಯೊಂದು ವರ್ಗದ ಅಂಗಡಿಗಳು ಎಷ್ಟು ಸಮಯದವರೆಗೆ ಮಾತ್ರ ತೆರೆದಿರಬೇಕು ಎಂಬುದನ್ನು ಕಡ್ಡಾಯವಾಗಿ ತಿಳಿಸಿ, ಆ ನಿಯಮಗಳನ್ನು ಪಾಲಿಸುವಂತೆ ನಿರ್ದೇಶನ ನೀಡಿದರು.

ಇಂದಿರಾ ಕ್ಯಾಂಟೀನ್ ಮತ್ತು ಮುಕ್ತಿಧಾಮದ ಸಮಸ್ಯೆಗಳ ಬಗೆಹರಿಕೆಗೆ ಚರ್ಚೆ :

ಪಟ್ಟಣದಲ್ಲಿ ಸಾರ್ವಜನಿಕರ ಅನುಕೂಲಕ್ಕಾಗಿ ಇಂದಿರಾ ಕ್ಯಾಂಟೀನ್ ಅನ್ನು ಪುನಃ ಆರಂಭಗೊಳಿಸುವ ಕುರಿತು ಸಭೆಯಲ್ಲಿ ಚರ್ಚಿಸಲಾಯಿತು. ಇದಲ್ಲದೆ, ಮುಕ್ತಿಧಾಮದಲ್ಲಿ ಎದುರಾಗಿರುವ ನೀರಿನ ಸಮಸ್ಯೆಯನ್ನು ತಕ್ಷಣ ಬಗೆಹರಿಸಲು ಮತ್ತು ಪಟ್ಟಣಕ್ಕೆ ಆಗಮಿಸಿರುವ ಸಾರ್ವಜನಿಕ ಸ್ಮಶಾನಕ್ಕೆ ಸೂಕ್ತ ಚಾಗಾವನ್ನು ಗುರುತಿಸುವ ಪ್ರಕ್ರಿಯೆಯನ್ನು ಶೀಘ್ರವಾಗಿ ಪೂರ್ಣಗೊಳಿಸುವಂತೆ ತಹಸೀಲ್ದಾರ್ ಮಮತಾ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಹುಳಿಯಾರು ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಹಲವು ದಿನಗಳಿಂದ ಸಾರ್ವಜನಿಕರಿಗೆ ತೊಂದರೆಯಾಂಟು ಮಾಡುತ್ತಿರುವ ಸಮಸ್ಯೆಗಳ ಪರಿಹಾರಕ್ಕಾಗಿ ಪಟ್ಟಣ ಪಂಚಾಯಿತಿ ಆಡಳಿತಾಧಿಕಾರಿಯಾಗಿ ಆಗಿರುವ ತಹಸೀಲ್ದಾರ್ ಮಮತಾ ಅವರು ಕಡಕ್ ಕ್ರಮಗಳಿಗೆ ಮುಂದಾಗಿದ್ದಾರೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ಲ್ಯಾಂಡ್ ಆರ್ಮಿ ಕಳಪೆ ಕಾಮಗಾರಿ ತನಿಖೆಯಾಗಲಿ:

1 ನೇ ಪುಟದಿಂದ

E-KYC ಕಿರುಕುಳಕ್ಕೆ ಕೊನೆ ಹಾಡಿ: ಪಡಿತರ ಅಂಗಡಿಗಳಲ್ಲಿ ಸರ್ವರ್ ಸಮಸ್ಯೆಯಿಂದ ಇ-ಪಿಜಿಎ ಮಾಡಲು ರೈತರು ದಿನಗಟ್ಟಲೆ ಸರತಿ ಸಾಲಿನಲ್ಲಿ ನಿಲ್ಲುವಂತಾಗಿದೆ. ಸರ್ಕಾರ ತುರ್ತಾಗಿ ತಾಂತ್ರಿಕ ಸಮಸ್ಯೆ ಬಗೆಹರಿಸಬೇಕು.

ಲ್ಯಾಂಡ್ ಆರ್ಮಿ ಕಳಪೆ ಕಾಮಗಾರಿ ತನಿಖೆಯಾಗಲಿ: ಶಾಪಗಡ ಪಟ್ಟಣದಲ್ಲಿ ಲ್ಯಾಂಡ್ ಆರ್ಮಿ ವತಿಯಿಂದ ನಡೆಯುತ್ತಿರುವ ಕಾಮಗಾರಿಗಳು ಅತ್ಯಂತ ಕಳಪೆ ಮಟ್ಟದ್ದಾಗಿದ್ದು ಉನ್ನತ ಮಟ್ಟದ ತನಿಖೆಯಾಗಿ ಗುಣಮಟ್ಟದ ಕಾಮಗಾರಿ ನಡೆಯಬೇಕು.

ನಮ್ಮ ನೆಲದ ಉದ್ಯೋಗ ನಮಗೆ ಸಿಗಲಿ ಕೊಡಿ: ಶಾಮಗಡದ ಹೆಮ್ಮೆಯ ಸೋಲಾರ್ ಕಂಪನಿಗಳಲ್ಲಿ ಹೊರಗಿನವರಿಗೆ ಉದ್ಯೋಗ ನೀಡಲಾಗುತ್ತಿದ್ದು ಸ್ಥಳೀಯ ನಿರುದ್ಯೋಗಿ ಯುವಕರಿಗೆ ಮೊದಲ ಆದ್ಯತೆ ನೀಡಬೇಕು.

ರೈತರಿಗೆ 7 ಗಂಟೆ ನಿರಂತರ ವಿದ್ಯುತ್: ಅಸಮರ್ಪಕ ವಿದ್ಯುತ್ ಸರಬರಾಜಿನಿಂದ ರೈತರ ಪಂಪ್ ಸೆಟ್‌ಗಳು ಸುಟ್ಟುಹೋಗುತ್ತಿವೆ. ಕೂಡಲೇ ಸರಿಪಡಿಸಿ 7 ಗಂಟೆಗಳ ಕಾಲ ಸಮರ್ಪಕ ವಿದ್ಯುತ್ ನೀಡಬೇಕು.

ಕ್ರೀಡಾಂಗಣ ಉಳಿಸಿ: ಸರ್ಕಾರಿ ಜೂನಿಯರ್ ಕಾಲೇಜು ಮೈದಾನದಲ್ಲಿ ಪಾಲಿಂಗ್ ಶಾಶ್ ಹೆಸರಿನಲ್ಲಿ ಕ್ರೀಡಾಪಟುಗಳ ಭವಿಷ್ಯಕ್ಕೆ ಕಲ್ಲು ಹಾಕಲಾಗುತ್ತಿದೆ. ಕೂಡಲೇ ಈ ಅವೈಜ್ಞಾನಿಕ ಕಾಮಗಾರಿ ನಿಲ್ಲಿಸಬೇಕು.

ಪ್ರತಿಭಟನೆಯ ನೇತೃತ್ವ:

ಈ ಪ್ರತಿಭಟನೆಯ ನೇತೃತ್ವವನ್ನು ಜನಪ್ರಿಯ ಮಾಜಿ ಶಾಸಕರಾದ ಶ್ರೀ ಕೆ.ಎಂ. ತಿಮ್ಮರಾಯಪ್ಪ ವಹಿಸಿದ್ದರು. ರಾಜ್ಯ ಎಆಐ ಉಪಾಧ್ಯಕ್ಷ ತಿಮ್ಮರೆಡ್ಡಿ ಹೊಟ್ಟೆಹೊಮ್ಮನಹಳ್ಳಿ, ಮಾಜಿ ಜಿಲ್ಲಾ ಎಆಐ ಅಧ್ಯಕ್ಷ ಆರ್.ಸಿ. ಅಂಜಿನಪ್ಪ, ಮಾಜಿ ಜಿ.ಪಂ ಉಜಾಧ್ಯಕ್ಷೆ ನಾಗಮಣಿ ನಾರಾಯಣಪ್ಪ, ಮಾಜಿ ತಾ.ಪಂ ಅಧ್ಯಕ್ಷ ಸೊಡಾ ವೆಂಕಟೇಶ್, ಎಕಿ ತಾಲೂಕು ಅಧ್ಯಕ್ಷ ಅಶೋಕ್ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು. ಇದೇ ವೇಳೆ ಮುಖಂಡರಾದ ಕೆಂಚಣ್ಣನಹಳ್ಳಿ ಗೋವಿಂದಪ್ಪ, ಬಲರಾಮ್ ರೆಡ್ಡಿ, ರವಿಕುಮಾರ್, ಗುಟ್ಟಪಳ್ಳಿ ಮಣಿ, ಜಿ.ಎ. ಮೊಳೇಶ್, ಗಂಗಾಧರ್ ನಾಯ್ಕ, ತಾಲೂಕು ಎಆಐ ಪ್ರಧಾನ ಕಾರ್ಯದರ್ಶಿ ಗೋವಿಂದಬಾಬು, ನಗರಾಧ್ಯಕ್ಷ ಆಪ್ ಬಂಡೆ ಗೋಪಾಲ್, ಗಾಯತ್ರಿ ಹೋಟೆಲ್ ಮಾಲೀಕ ರಾಮಕೃಷ್ಣ ರೆಡ್ಡಿ, ಶೀಬರ್ ಬಾಬು, ಪ್ರಸಾದ್ ಬಾಬು, ಅಂಬಿಕಾ ರಮೇಶ್, ಶಕುಂತಲಾ ಬಾಯಿ ಸೇರಿದಂತೆ ನೂರಾರು ಕಾರ್ಯಕರ್ತರು ಪಾಲ್ಗೊಂಡಿದ್ದರು.

64ನೇ ವರ್ಷದ ಗಣೇಶೋತ್ಸವ ಹಾಗೂ ವಿಸರ್ಜನಾ ಮಹೋತ್ಸವ

ಸೂರ್ಯಪ್ರಗತಿನ್ಯೂಸ್.ಕಾಂ

ಚಿಕ್ಕನಾಯಕನಹಳ್ಳಿ:-ವಿವಿಧ ಚಾನಸದ ಕಲಾತಂಡಗಳೊಂದಿಗೆ 64ನೇ ವರ್ಷದ ಗಣೇಶೋತ್ಸವ ಸಮಾರಂಭ ನಡೆದು ಇದರ ಅಂಗವಾಗಿ ಮಂಗಳವಾರ ಅನ್ನಸಂತರ್ಪಣೆ ಕಾರ್ಯಕ್ರಮವನ್ನುಯ ಆಯೋಜಿಸಲಾಗಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಸಾರ್ವಜನಿಕರು ಭಕ್ತರು ಭಾಗವಹಿಸಿದ್ದರು ಎಂದು ಶಾಸಕ ಸಿ.ಬಿ.ಸುರೇಶ್‌ಬಾಬು ತಿಳಿಸಿದರು.

ಪಟ್ಟಣದ ಮಾರ್ಕೆಟ್ ಬಳಿ ಶ್ರೀ ಸತ್ಯಗಣಪತಿ ಸಾರ್ವಜನಿಕ ತರುಣರ ಸಂಘದ ವತಿಯಿಂದ ಪ್ರತಿಷ್ಠಾಪಿಸಲಾಗಿದ್ದ 64ನೇ ವರ್ಷದ ಗಣೇಶೋತ್ಸವದ ಅಂಗವಾಗಿ ಗಣಪತಿ ಹೋಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು ಪ್ರತಿವರ್ಷದಂತೆ ಈ ವರ್ಷವು ಸೋಮವಾರ ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮದ್ಯಾಹ್ನ 2ಗಂಟೆಗೆ ಉತ್ಸವ ಪ್ರಾರಂಭವಾಗಿ ಇದರಲ್ಲಿ ಚಾನಸದ ಕಲಾತಂಡಗಳಾದ ವೀರಗಾಸೆ, ಸೋಮನಕುಣಿತ, ಅಗ್ನಿದಾನ ತಮಟೆವಾದ್ಯ ಕೀಲು ಕುದುರೆ, ಗೋಂಬೆ ಬಳಗ, ಗೋರಿಲ್ಲ ಮಿಕ್ಕಿ ಮೌಸ್, ಮೈಸೂರು ನಗಾರಿ, ಡೊಳ್ಳುಕುಣಿತ ಸೇರಿದಂತೆ ಮಂಗಳವಾದ್ಯಗಳೊಂದಿಗೆ ಉತ್ಸವ ನಡೆಯಲಿದ್ದು ರಾತ್ರಿ 8ಗಂಟೆಗೆ ಪಟ್ಟಣದ ಹೈಸ್ಕೂಲ್ ಮೈದಾನದಲ್ಲಿ ಮದ್ದುಗುಂಡಿನ ಪ್ರದರ್ಶನ ವನ್ನು ಏರ್ಪಡಿಸಲಾಗಿತ್ತು ಇಂದು ಮದ್ಯಾಹ್ನ ಅನ್ನಸಂತರ್ಪಣೆಯನ್ನು ಏರ್ಪಡಿಸಲಿದ್ದು ಈ ಕಾರ್ಯಕ್ರಮದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಪಾಲ್ಗೊಳ್ಳಬೇಕೆಂದು ತಿಳಿಸಿದರು. ಗಣೇಶೋತ್ಸವದ ಅಂಗವಾಗಿ ಭಾನುವಾರ ಗಣಪತಿಹೋಮ ಶ್ರೀರಾಮಕೃಷ್ಣಜೋಯಿಸ್ ಇವರ ನೇತೃತ್ವದಲ್ಲಿ ನಡೆಯಿತು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ಅಗತ್ಯ ದಾಖಲಾತಿಗಳನ್ನು ನೀಡಿ ಮತದಾರರ ಪಟ್ಟಿಗೆ ಸೇರಿಸಿ

ಸೂರ್ಯಪ್ರಗತಿನ್ಯೂಸ್.ಕಾಂ

ತುಮಕೂರು: ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಮತದಾರರ ಪಟ್ಟಿಯಿಂದ ಅರ್ಹ ಮತದಾರರು ಕೈಬಿಡಲ್ಪಟ್ಟಿದ್ದರಲ್ಲಿ ಉಪವಿಭಾಗಾಧಿಕಾರಿ ಹಾಗೂ ತುಮಕೂರು ಉಪ ವಿಭಾಗದ ಮತದಾರರ ನೋಂದಣಾಧಿಕಾರಿಯನ್ನು ನೇರವಾಗಿ ಭೇಟಿ ಮಾಡಿ ಅಗತ್ಯ ದಾಖಲಾತಿಗಳನ್ನು ಸಲ್ಲಿಸುವ ಮೂಲಕ ಮತದಾರರ ಪಟ್ಟಿಗೆ ಹೆಸರನ್ನು ಸೇರಿಸಬಹುದಾಗಿದೆ ಎಂದು ಉಪವಿಭಾಗಾಧಿಕಾರಿ ನಾಹಿದಾ ಜಂ ಜಂ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ(ಎಸ್ಐಆರ್) ಕಾರ್ಯದಲ್ಲಿ ತುಮಕೂರು ಗ್ರಾಮಾಂತರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿರುವ 238 ಮತಗಟ್ಟೆಗಳಲ್ಲಿ ಮುಖ್ಯ ಚುನಾವಣಾ ಆಯೋಗದ ನಿರ್ದೇಶನದಂತೆ ಮತದಾರರ ಪಟ್ಟಿಯನ್ನು ಪರಿಶೀಲಿಸಿದಾಗ 4466 ಮತದಾರರು ಮರಣ ಹೊಂದಿರುವ ಹಾಗೂ 2458 ಮತದಾರರು ಡಬಲ್ ಎಂಟ್ರಿ ಆಗಿರುವ ಬಗ್ಗೆ ತಿಳಿದು ಬಂದಿದೆ.

ಮರಣ ಹೊಂದಿರುವ ಮತದಾರರ ಮರಣ ಪ್ರಮಾಣ ಪತ್ರವನ್ನು ಪಡೆದು ಹಾಗೂ ಡಬಲ್ ಎಂಟ್ರಿ ಆಗಿರುವ ಮತದಾರರ ಎಪಿಕ್ ಸಂಖ್ಯೆಗಳನ್ನು ಪಡೆದು ಮತ್ತೊಮ್ಮೆ ಪರಿಶೀಲಿಸಿ ಪಟ್ಟಿಯಿಂದ ಕೈಬಿಡಲು ಕ್ರಮ ಕೈಗೊಳ್ಳಲಾಗಿದೆ. ಶಾಶ್ವತ ವರ್ಗಾವಣೆಯಾಗಿರುವ 10625 ಮತದಾರರ ದಾಖಲಾತಿಗಳನ್ನು ಪಡೆದು ವರ್ಗಾವಣೆ ಮಾಡಲು ಕ್ರಮವಹಿಸಲಾಗಿದೆ.

ಈ ವಿಧಾನಸಭಾ ಕ್ಷೇತ್ರದಲ್ಲಿ 4466 ಮರಣ ಹೊಂದಿರುವ, 2458 ಡಬಲ್ ಎಂಟ್ರಿ ಆಗಿರುವ ಹಾಗೂ 10625 ಶಾಶ್ವತ ವರ್ಗಾವಣೆಯಾಗಿರುವ ಮತದಾರರು ಸೇರಿದಂತೆ ಒಟ್ಟು 17549 ಮತದಾರರನ್ನು ಮತದಾರರ ಪಟ್ಟಿಯಿಂದ ಕೈಬಿಡಲ್ಪಟ್ಟಿದೆ. ಎಸ್ಐಆರ್ ಪ್ರಕ್ರಿಯೆಯ ಪ್ರತಿಯೊಂದು ಕ್ರಮಗಳ ಕುರಿತು ಪ್ರತೀ ಶುಕ್ರವಾರ ಮಾನ್ಯತೆ ಪಡೆದ ರಾಜಕೀಯ ಪಕ್ಷಗಳ ಮುಖಂಡರುಗಳ ಸಭೆಯಲ್ಲಿ ಮಾಹಿತಿ ನೀಡಲಾಗಿದೆ.

ಮ್ಯಾಪಿಂಗ್ ಆಗದಿರುವ 9301 ಮತದಾರರಿಗೆ ಈಗಾಗಲೇ ನೋಟೀಸ್ ಜಾರಿ ಮಾಡಲಾಗಿದ್ದು, ನೋಟೀಸ್ ಜಾರಿಯಾಗಿರುವ ಮತದಾರರಿಂದ ದಾಖಲಾತಿಗಳನ್ನು ಪಡೆದು ಮತದಾರರ ಪಟ್ಟಿಯಲ್ಲಿ ಹೆಸರುಗಳನ್ನು ಉಳಿಸುವ ಬಗ್ಗೆ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದ್ದಾರೆ.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ

ಬರದ ಸಂಕಷ್ಟದಲ್ಲಿರುವ ಅನ್ನದಾತನಿಗೆ ಪರಿಹಾರ ನೀಡಬೇಕು

ಶಿರಾ : ಬರದ ಸಂಕಷ್ಟದಲ್ಲಿರುವ ಅನ್ನದಾತನಿಗೆ ಬೆಳೆ ನಷ್ಟ ಪರಿಹಾರ ತಕ್ಷಣ ನೀಡಬೇಕು, ಪ್ರತಿ ಎಕರೆಗೆ 5. ಸಾವಿರ ರೂಪಾಯಿ ಬೆಳೆನಷ್ಟ ಪರಿಹಾರ ನೀಡಿದರೆ ಮತ್ತೆ ಕೃಷಿ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಆತ್ಮವಿಶ್ವಾಸ ಮೂಡಿಸಬೇಕು ಎಂದು ಸ್ಪಟಿಕಪುರಿ ಮಹಾ ಸಂಸ್ಥಾನದ ಪೀಠಾಧ್ಯಕ್ಷರಾದ ಶ್ರೀ ನಂಜಾವಧೂತ ಸ್ವಾಮೀಜಿ ಹೇಳಿದರು.

ಶಿರಾ ತಾಲೂಕಿನ ಪಟ್ಟನಾಯಕನಹಳ್ಳಿ, ಶ್ರೀ ಗುರುಗುಂಡ ಬ್ರಹ್ಮೇಶ್ವರ ಸ್ವಾಮಿ ಮಕಡದಲ್ಲಿ ಪ್ರತಿಷ್ಠಾಪನೆ ಮಾಡಲಾಗಿದ್ದಗಣೇಶಮೂರ್ತಿ ವಿಸರ್ಜನಾ ಮಹೋತ್ಸವಕ್ಕೆ ಚಾಲನೆ ನೀಡಿ ಮಾತನಾಡಿದರು.ಅಪ್ಪರ ಭದ್ರ ಮಧ್ಯ ಕರ್ನಾಟಕದ ಬಲ್ಲೇಗೆ ಪಾಲಿಗೆ ವರದಾನ ಎಂಬ ದೃಷ್ಟಿಕೋನದಿಂದ ಅಪ್ಪರ ಭದ್ರ ನೀರಾವರಿ ಕಾಮಗಾರಿಪ್ರಾರಂಭವಾಗಿ ಚಿತ್ರದುರ್ಗ ನಾಲೆ ಪೂರ್ಣಗೊಂಡ ಕಾರಣ, ಕಾಲುವೆ ಗಳ ಮೂಲಕ ನೀರು ಹರಿದು ಕೆರೆಗಳಿಗೆ ಬಂದಿರುವುದುಹರ್ಷದಾಯಕ.ಪ್ರಾರಂಭಿಕವಾಗಿ ತುಮಕೂರು ನಾಲೆಗೆ ನೀರು ಬರುತ್ತದೆ ಎಂಬ ನಮ್ಮ ಮಹತ್ವಾಕಾಂಕ್ಷೆ ಈಡೇರದೆ ಇರುವುದು ಬೇಸರ ಮೂಡಿಸಿದ್ದು, ತುಮಕೂರು ನಾಲೆ ಕಾಮಗಾರಿ ಪೂರ್ಣಗೊಳಿಸಲು ಕೇಂದ್ರ ಸರ್ಕಾರ ಕಡತ 5300 ಕೋಟಿ ರೂಪಾಯಿ ಅನುದಾನ ಬಿಡುಗ